# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 261 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–05–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 261 | Title- Code: KARKAN 28269 | Chitradurga | Date: 07-05-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಪೌರಾಣಿಕ ನಾಟಕಗಳು ಭಾರತೀಯ ಸಂಸ್ಕೃತಿಯ ಪ್ರತೀಕ: ಪ್ರದೀಪ್ 2
ಬೆಳೆ ಸಮೀಕ್ಷೆ ವ್ಯತ್ಯಾಸ; ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಕ್ರಮ: ಡಿಸಿ 3
ಬೆಳೆ ಸಮೀಕ್ಷೆ ವ್ಯತ್ಯಾಸ; ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಕ್ರಮ: ಡಿಸಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಇಂದು ಕೋಟೆ ನಾಡಿನ ರಾಜಬೀದಿಯಲ್ಲಿ ಅಕ್ಕ–ತಂಗಿ ಭೇಟಿ

» ನಮ್ಮಜನ ವಿಶೇಷ

ಚಿತ್ರದುರ್ಗ : ಕೋಟೆ ನಾಡು ಚಿತ್ರದುರ್ಗದಲ್ಲಿ ಪಾಳೇಗಾರರ ಆಡಳಿತ ಕಾಲದಿಂದ ನವದುರ್ಗೆಯರ ದುರ್ಗವನ್ನು ಕಾಯುತ್ತಾರೆ ಎಂಬ ಮಾತು ಸಹ ಇದೆ. ದುರ್ಗದಲ್ಲಿ ಅಕ್ಕ –ತಂಗಿಯರ ಸಮಾಗಮವನ್ನು ಸಹ ಜನರು ನೋಡಿದ್ದಾರೆ. ಆದರೆ ದುರ್ಗದಲ್ಲಿ ಪ್ರತಿ ವರ್ಷ ದುರ್ಗ ಶಕ್ತಿ ದೇವತೆಗಳಾದ ಬರಗೇರಮ್ಮ ಮತ್ತು ತಿಪ್ಪಿನ ಘಟ್ಟಮ್ಮ ಭೇಟಿ ಉತ್ಸವ ನಡೆಯುತ್ತಿದ್ದು ಈ ಭೇಟಿ ಉತ್ಸವಕ್ಕೆ ಒಂದು ಇತಿಹಾಸವಿದೆ ಎಂಬುದು ಯುವ ಪೀಳಿಗೆಗೆ ತಿಳಿದಿಲ್ಲ.

**ಭೇಟಿ ಉತ್ಸವಕ್ಕೆ ಅಕ್ಕ – ತಂಗಿ ಭೇಟಿ ಹಿನ್ನಲೆ ಕಥೆ:** ಅಕ್ಕ ತಂಗಿಯರಾದ ಬರಗೇರಮ್ಮ, ತಿಪ್ಪಿನಘಟ್ಟಮ್ಮ ದೇವತೆಯ ಭೇಟಿ ಉತ್ಸವದ ಹಿಂದೆ ಕುತೂಹಲಕಾರಿ ಕಥೆಯಿದೆ. ನವದುರ್ಗೆಯರಾದ ಏಕನಾಥೇಶ್ವರಿ, ಉಚ್ಚಂಗಿ ಯಲ್ಲಮ್ಮ, ಬರಗೇರಮ್ಮ, ತಿಪ್ಪಿನಘಟ್ಟಮ್ಮ, ಕಣಿವೆಮಾರಮ್ಮ, ಚೌಡಮ್ಮ, ಗೌರಸಂದ್ರ ಮಾರಮ್ಮ, ಕುಕ್ಕವಾಡೇಶ್ವರಿ, ಕಾಳಿ ದೇವತೆ ದುರ್ಗದ ರಕ್ಷಕ ದೇವತೆಗಳು ಎನ್ನುವ ಪ್ರತೀತಿ ಇದೆ.ನವದುರ್ಗೆಯರಲ್ಲಿ ತಿಪ್ಪಿನಘಟ್ಟಮ್ಮ ದೇವತೆಗೆ ಏಳು ಜನ ಮಕ್ಕಳು. ಈಕೆಯ ಪ್ರೀತಿ ಪಾತ್ರಳಾದ ಅಕ್ಕ ಬರಗೇರಮ್ಮ ದೇವಿಗೆ ಮಕ್ಕಳಿರಲಿಲ್ಲ. ಹೀಗಾಗಿ, ತಂಗಿಯ ಮಕ್ಕಳ ಮೇಲೆ ಅಪಾರ ಮಮತೆ, ಪ್ರೀತಿ, ವಾತ್ಸಲ್ಯವಿತ್ತು. ವಾರಕ್ಕೊಮ್ಮೆ ತಂಗಿ ಮನೆಗೆ ಬಂದು, ಮಕ್ಕಳನ್ನು ಕಂಡು ಅವರ ಜತೆ ಆಟವಾಡುತ್ತಾ ಕಾಲ ಕಳೆದು ಹಿಂತಿರುಗುತ್ತಿದ್ದಳು.

### ಪ್ರತಿ ವರ್ಷ ಅಕ್ಕ-ತಂಗಿ ಭೇಟಿ ಏಕೆ?



ಈ ಇಬ್ಬರ ಮಮತೆ ಪ್ರೀತಿಯನ್ನು ಕಂಡು ಅಸೂಯೆಪಟ್ಟ ನವದುರ್ಗೆಯರಲ್ಲೊಬ್ಬಳು ತಿಪ್ಪಿನಘಟ್ಟಮ್ಮನಿಗೆ, 'ಬರಗೇರಮ್ಮ ಬಂಜೆ, ಆಕೆ ಬಂದು ನಿನ್ನ ಮಕ್ಕಳನ್ನು ಮುಟ್ಟಿದರೆ ಒಳ್ಳೆಯದಾಗುವುದಿಲ್ಲ' ಎಂದು ಚಾಡಿ ಹೇಳುತ್ತಾಳೆ. ಇದರಿಂದ ಹೆದರಿದ ತಿಪ್ಪಿನಘಟ್ಟಮ್ಮ ತನ್ನ ಅಕ್ಕ ಮನೆಗೆ ಬಂದಾಗ ಆಕೆಯ ದೃಷ್ಟಿಗೆ ಬೀಳಬಾರದೆಂದು ತನ್ನ ಮಕ್ಕಳನ್ನು ಬಚ್ಚಿಡುತಾಳೆ. ಇದರಿಂದ ಕೋಪಗೊಂಡ ಅಕ್ಕ ಬರಗೇರಮ್ಮ ಸಿಟ್ಟಿನಲ್ಲಿ 'ನಿನ್ನ ಮಕ್ಕಳು ಕಲ್ಲಾಗಲಿ'. ಇನ್ನೆಂದು ನಿನ್ನ ಮುಖ ನೋಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿ ಹಿಂತಿರುಗುತ್ತಾಳೆ.ಆಗ ಏಕನಾಥೇಶ್ವರಿ ಊರಿನ ಒಳಿತಿಗಾಗಿ ವರ್ಷಕ್ಕೊಮ್ಮೆ ತನ್ನ ಸಮ್ಮುಖದಲ್ಲಿ ನೀವಿಬ್ಬರು ಭೇಟಿಯಾಗಬೇಕೆಂದು ಆದೇಶಿಸುತ್ತಾಳೆ. ಹಿರಿಯಕ್ಕನ ಆದೇಶದಂತೆ ಪ್ರತಿ ವರ್ಷ ಅಕ್ಕ ತಂಗಿಯರು ರಾಜಬೀದಿಯಲ್ಲಿ ಭೇಟಿಯಾಗುತ್ತಾರೆ.ಭೇಟಿಯಾಗುವ ಕ್ಷಣವನ್ನು ಬೆಟ್ಟದ ತುದಿಯಲ್ಲಿ ನಿಂತು ಏಕನಾಥೇಶ್ವರಿ ದೇವಿ ವೀಕ್ಷಿಸುತ್ತಾಳೆ ಎಂಬ ಪ್ರತೀತಿ ಇದೆ. ಜನಪದ ಹಿನ್ನೆಲೆಯ ಭೇಟಿ ಉತ್ಸವ ನಗರದ ಐತಿಹಾಸಿಕ ಸಾಂಸ್ಕೃತಿಕ ಹಬ್ಬವೆನಿಸಿದೆ.

## ಫಾಸ್ಟ್ ನ್ಯೂಸ್

### 4 ಲಕ್ಷ ಪಡೆಯುವಾಗ ಬಸವರಾಜಪ್ಪ ಲೋಕ ಬಲೆಗೆ

» ನಮ್ಮಜನ ಸಮಾಚಾರ ಚಿತ್ರದುರ್ಗ



ಚಿತ್ರದುರ್ಗ ಬಯಲುಸೀಮೆ ಅಭಿವೃದ್ಧಿ ಮಂಡಳಿ ಪ್ರಭಾರ ಕಾರ್ಯದರ್ಶಿ ಬಸವರಾಜಪ್ಪ ನಾಲ್ಕು ಲಕ್ಷ ಲಂಚ ಪಡೆಯುವಾಗ ಲೋಕಯುಕ್ತ ಬಲೆಗೆ ಬಿದ್ದಿದ್ದಾರೆ. ಮೇ 6 ರಂದು ಮಧ್ಯಾಹ್ನ 3 ಗಂಟೆಗೆ ಹಣ ಪಡೆಯುವ ಸಮಯದಲ್ಲಿ ಲೋಕಯುಕ್ತ ಬಲೆಗೆ ಬಿದ್ದಿದ್ದು ಕಾಮಗಾರಿ ಆಡಳಿತಾತ್ಮಕ ಮಂಜೂರು ಮಾಡಲು 4 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು.ಈ ಹಿನ್ನೆಲೆಯಲ್ಲಿ ಬಸವರಾಜಪ್ಪ ವಿರುದ್ಧ ಜಗಳೂರು ಮೂಲದ ಸಿದ್ದನಗೌಡ ಎಂಬ ವ್ಯಕ್ತಿಯು ಲೋಕಯುಕ್ತಕ್ಕೆ ದೂರು ನೀಡಿದ್ದರು. ಇಂದು ಸಿದ್ದನಗೌಡ 4 ಲಕ್ಷ ಹಣ ತೆಗೆದುಕೊಂಡು ಬಸವರಾಜಪ್ಪ ಅವರಿಗೆ ನೀಡುವ ಸಂದರ್ಭದಲ್ಲಿ ರೆಡ್ ಹ್ಯಾಂಡ್ ಆಗಿ ಬಸವರಾಜಪ್ಪ ಲೋಕಯುಕ್ತ ಸಿಲುಕಿದ್ದಾರೆ. ಈ ದಾಳಿಯನ್ನು ಲೋಕಯುಕ್ತ ಎಸ್ಪಿ ವಾಸದೇವ್ ರಾವ್ ಮತ್ತು ಡಿವೈಎಸ್ಪಿ ಮೃತ್ಯಂಜಯ ಅವರ ನೇತೃತ್ವದಲ್ಲಿ ಈ ದಾಳಿ ಮಾಡಲಾಗಿದೆ.




## ಫಾಸ್ಟ್ ನ್ಯೂಸ್

### 9 ರಂದು ಬೈಕ್ ರ್ಯಾಲಿ

» **ಚಿತ್ರದುರ್ಗ**

ಜಿಲ್ಲಾ ವೀರಶೈವ ಸಮಾಜದಿಂದ ಸಾಂಸ್ಕೃತಿಕ ನಾಯಕ, ಮಹಾ ಮಾನವತವಾದಿ ವಿಶ್ವಗುರು, ಬಸವಣ್ಣ ರವರ ಜಯಂತೋತ್ಸವದ ಅಂಗವಾಗಿ ಬೈಕ್ ರ್ಯಾಲಿ ಹಾಗೂ ಬಸವೇಶ್ವರ ಭಾವಚಿತ್ರ ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವೀರಶೈವ ಸಮಾಜದ ಅಧ್ಯಕ್ಷ ಎಚ್.ಎನ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ. 9ರ ಮಧ್ಯಾಹ್ನ 3.30ಕ್ಕೆ ವೀರಶೈವ ಯುವ ಸಂಘಟನೆ ವತಿಯಿಂದ ಬೈಕ್ ರ್ಯಾಲಿ ನಗರದ ನೀಲಕಂಠೇಶ್ವರ ಸ್ವಾಮಿ ದೇವಾಲಯದಿಂದ ಪ್ರಾರಂಭವಾಗಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮರಳಿ ದೇವಸ್ಥಾನದಲ್ಲಿ ಸಮಾಪ್ತಿಯಾಗಲಿದೆ. 10ರ ಸಂಜೆ 4 ಗಂಟೆಗೆ ಸಾಂಸ್ಕೃತಿಕ ನಾಯಕ ಮಹಾ ಮಾನವತವಾದಿ ವಿಶ್ವಗುರು, ಬಸವಣ್ಣ ರವರ ಜಯಂತೋತ್ಸವದ ಅಂಗವಾಗಿ ಶ್ರೀ ಬಸವೇಶ್ವರರ ಭಾವಚಿತ್ರ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಲಿದ್ದು, ದೇವಸ್ಥಾನದಿಂದ ಆರಂಭವಾಗುವ ಮೆರವಣಿಗೆ ಗಾಂಧಿ ವೃತ್ತ, ಆನೆ ಬಾಗಿಲು, ಚಿಕ್ಕಪೇಟೆ, ದೊಡ್ಡಪೇಟೆ,ರಂಗಯ್ಯನಬಾಗಿಲು,ಬಸವಮಂಟಪ ರಸ್ತೆ ಅಂಬೇಡ್ಕರ್ ವೃತ್ತ, ಬಿ.ಡಿ.ರಸ್ತೆಯ ಮೂಲಕ ಮರಳಿ ದೇವಸ್ಥಾನ ತಲುಪಲಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಬಸವತತ್ವಾಭಿಮಾನಿಗಳು ಸಮಾಜ ಬಾಂಧವರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ಬಸವಣ್ಣನವರ ಜಯಂತೋತ್ಸವವನ್ನು ಯಶಸ್ವಿಗೂಳಿಸಲು ಮನವಿ ಮಾಡಿದ್ದಾರೆ.

### 7 ರಿಂದ ಸ್ಫೂರ್ತಿ-2024 ಕ್ರೀಡಾ, ಸಾಂಸ್ಕೃತಿಕ ಉತ್ಸವ

» **ಚಿತ್ರದುರ್ಗ**

ನಗರದ ಎಸ್‌ಜೆಎಂ ತಾಂತ್ರಿಕ ಮಹಾವಿದ್ಯಾಲಯದಲ್ಲಿ 7 ರಿಂದ 9 ರವರೆಗೆ ಮೂರು ದಿನಗಳ ಕಾಲ ಸ್ಫೂರ್ತಿ–2024 ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವ ಆಯೋಜಿಸಲಾಗಿದೆ. 7 ರಂದು ಬೆಳಿಗ್ಗೆ 10.30 ಗಂಟೆಗೆ ಜಯದೇವ ವೇದಿಕೆಯಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ.ವಿದ್ಯಾರ್ಥಿಗಳಿಗಾಗಿ ಸಾಂಪ್ರದಾಯಕ ಉಡುಗೆ–ತೊಡುಗೆಗಳ ಎತ್ನಿಕ್–ಡೇ ಆಯೋಜಿಸಲಾಗಿದೆ. ಸಂಜೆ 6 ಗಂಟೆಗೆ ಡ್ಯಾನ್ಸ್ ಜೆ.ಎಂ.ಐ.ಟಿ.ಡ್ಯಾನ್ಸ್ ನೃತ್ಯಸ್ಪರ್ಧೆ ನಡೆಯಲಿದೆ. 8 ರಂದು ಸಂಜೆ 6 ಗಂಟೆಗೆ ಮಿಸ್ಟರ್ ಜೆಎಂಐಟಿ ಸ್ಪರ್ಧೆ ನಡೆಯಲಿದೆ. 9 ರಂದು ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮಕ್ಕೆ ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿ ಅಧ್ಯಕ್ಷ ಶಿವಯೋಗಿ ಸಿ ಕಳಸದ, ಐಎಎಸ್, ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿ ಸದಸ್ಯರಾದ ಎಸ್.ಎನ್. ಚಂದ್ರಶೇಖರ್, ಡಾ. ಪಿ.ಎಸ್.ಶಂಕರ್, ಡಾ.ಬಸವಕುಮಾರ ಸ್ವಾಮಿಗಳು ಆಗಮಿಸಲಿದ್ದು, ಮುಖ್ಯಅತಿಥಿಗಳಾಗಿ ಹಾವೇರಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಸುರೇಶ್ ಹೆಚ್. ಜಂಗಮಶೆಟ್ಟಿ, ಟೆನಿಕೋ ಪವರ್‌ಟ್ರೈನ್ ಹೆಡ್ ಇಂಡಿಯಾಟೆಕ್ನಿಕಲ್ ಸೆಂಟರ್‌ನಅಪ್ಲಿಕೇಶನ್ ಇಂಜಿನಿಯರಿಂಗ್ ನಿರ್ದೇಶಕ ಹಾಗೂ ಕಾಲೇಜಿನ ಹಳೆಯ ವಿದ್ಯಾರ್ಥಿಶ್ರೀ ಶ್ರೀಧರ್ ರಾಮಕೃಷ್ಣ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ.ಭರತ್ ಪಿ.ಬಿ. ವಹಿಸಲಿದ್ದಾರೆ ಎಂದು ಮುಖ್ಯ ಸಂಚಾಲಕ ಡಾ.ಬಿ ಜಿ ಕುಮಾರಸ್ವಾಮಿ ತಿಳಿಸಿದ್ದಾರೆ.

### ಚುನಾವಣೆ ಮತದಾರ ಜಾಗೃತಿಗೆ ಹಾಟ್ ಏರ್ ಬಲೂನ್ ಹಾರಟ



» **ದಾವಣಗೆರೆ**

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಸ್ವೀಪ್ ಸಮಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರುಗಳ ಸಂಯುಕ್ತಾಶ್ರಯದಲ್ಲಿ ಮೇ.5 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಮತದಾನೋತ್ಸವ ಅಂಗವಾಗಿ ಹಾಟ್ ಏರ್ ಬಲೂನ್ ಸಾಹಸ ಕ್ರೀಡೆ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಮತದಾರ ಜಾಗೃತಿ ಹಾಟ್ ಏರ್ ಬಲೂನ್‌ಗೆ ಚಾಲನೆ ನೀಡಿದರು.

# ನಗರದಲ್ಲಿ ಅಕ್ಕ-ತಂಗಿಯರ ಭೇಟಿ ಉತ್ಸವಕ್ಕೆ ಸಿದ್ಧತೆ

» **ಚಿತ್ರದುರ್ಗ**

ಸಹೋದರಿಯರ ನಡುವೆ ಜಗಳ, ಮುನಿಸು ಇರುವುದು ಸಹಜ. ಆದ್ರೆ, ಕೋಟೆನಾಡಿನಲ್ಲಿ ಮಾತ್ರ ಮುನಿದು ಮುಖ ತಿರುಗಿಸುವ ಅಕ್ಕ–ತಂಗಿಯರು ವರ್ಷಕ್ಕೊಮ್ಮೆ ಮಾತ್ರ ಭೇಟಿ ಆಗುವ ಸಂಪ್ರದಾಯವಿದೆ ಆ ಸಹೋದರಿಯರ ಭೇಟಿಗೆ ಸಾವಿರಾರು ಜನ ಸಾಕ್ಷಿ ಆಗುತ್ತಾರೆ ಎಂಬುದು ಮತ್ತೊಂದು ಸೋಜಿಗ.

ಸಾಂಪ್ರದಾಯಿಕ ಅಕ್ಕ–ತಂಗಿ ಭೇಟಿಯ ಉತ್ಸವವಾಗಿದೆ. ಅಕ್ಕ–ತಂಗಿ ಭೇಟಿ ಉತ್ಸವ ದುರ್ಗದ ಪರಂಪರೆಯ ಉತ್ಸವವಾಗಿದೆ. ದುರ್ಗದ ಹೆಣ್ಣುಮಕ್ಕಳು ಈ ಸಂದರ್ಭದಲ್ಲಿ ತವರಿಗೆ ಬಂದು ಅಕ್ಕ–ತಂಗಿ ಭೇಟಿ ಉತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸುವುದು ವಿಶೇಷವಾಗಿದೆ. ಚಿತ್ರದುರ್ಗ ನಗರದಲ್ಲಿಯೂ ಏಕನಾಥೇಶ್ವರಿ ದೇವಿ, ಉಚ್ಚಂಗ ಯಲ್ಲಮ್ಮ ತಾಯಿ, ಚಾಮುಂಡೇಶ್ವರಿ ದೇವಿ, ಕಣಿವೆ ಮಾರಮ್ಮ ದೇವಿ ಮುಂತಾದ ಹೆಣ್ಣು ದೇವರುಗಳ ಆರಾಧನೆ ಹೆಚ್ಚಾಗಿದೆ.

ಅಕ್ಕ ತಂಗಿಯರಾದ ತಿಪ್ಪಿನಘಟಮ್ಮ ಮತ್ತು ಬರಗೇರಮ್ಮ ದೇವಿ ಭೇಟಿಗೂ ಕುತೂಹಲಕಾರಿ ಕಥೆಯೊಂದಿದೆ. ನವದುರ್ಗೆಯರಾದ ಕಾಳಿ, ಉಚ್ಚಂಗೆಮ್ಮ, ತಿಪ್ಪಿನಘಟ್ಟಮ್ಮ, ಬರಗೇರಮ್ಮ, ಚೌಡಮ್ಮ, ಗೌರಸಂದ್ರಮಾರಮ್ಮ, ಕಣಿವೆಮಾರಮ್ಮ, ಕುಕ್ಕಡಮ್ಮ, ಏಕನಾಥೇಶ್ವರಿ ದೇವಿ ಚಿತ್ರದುರ್ಗದ ರಕ್ಷಕ ದೇವತೆಗಳು ಎನ್ನುವ ಪ್ರತೀತಿ ಇದೆ.ನವದುರ್ಗೆಯರಲ್ಲಿ ತಿಪ್ಪಿನ ಘಟ್ಟಮ್ಮನಿಗೆ ಏಳು ಜನ ಮಕ್ಕಳು. ಈಕೆಯ ಪ್ರೀತಿ ಪಾತ್ರ ಅಕ್ಕ ಬರಗೇರಮ್ಮನಿಗೆ ಮಕ್ಕಳಿರಲಿಲ್ಲ. ಹೀಗಾಗಿ ತಂಗಿಯ ಮಕ್ಕಳ ಮೇಲೆ ಅಪಾರ ಮಮತೆ, ಪ್ರೀತಿ– ವಾತ್ಸಲ್ಯವಿತ್ತು. ವಾರಕ್ಕೊಮ್ಮೆ ತಂಗಿ ಮನೆಗೆ ಬಂದು, ಮಕ್ಕಳನ್ನು ಕಂಡು ಅವರ ಜತೆ ಆಟವಾಡುತ್ತಾ ಕಾಲ ಕಳೆದು ಹಿಂತಿರುಗುತ್ತಿದ್ದಳು.





ಅಕ್ಕ–ತಂಗಿಯರ ಮಮತೆ ಪ್ರೀತಿಯನ್ನು ಕಂಡು ಅಸೂಯೆ ಪಟ್ಟ ನವದುರ್ಗೆಯರಲ್ಲಿ ಒಬ್ಬಳು ತಿಪ್ಪಿನಘಟ್ಟಮ್ಮನಿಗೆ, ಬರಗೇರಮ್ಮ ಬಂಜೆ ಆಕೆ ಬಂದು ನಿನ್ನ ಮಕ್ಕಳನ್ನು ಮುಟ್ಟಿದರೆ ಒಳ್ಳೆಯದಾಗುವುದಿಲ್ಲ ಎಂದು ಚಾಡಿ ಹೇಳುತ್ತಾಳೆ. ಇದರಿಂದ ಹೆದರಿದ ತಿಪ್ಪಿನಘಟ್ಟಮ್ಮ ತನ್ನ ಅಕ್ಕ ಮನೆಗೆ ಬಂದಾಗ ತನ್ನ ಮಕ್ಕಳು ಆಕೆಯ ದೃಷ್ಟಿಗೆ ಬೀಳಬಾರದು ಎಂದು ಮಕ್ಕಳನ್ನು ಬಚ್ಚಿಡುತ್ತಾಳೆ. ಇದರಿಂದ ಕೋಪಗೊಂಡ ಅಕ್ಕ ಬರಗೇರಮ್ಮ ಸಿಟ್ಟಿನಲ್ಲಿ 'ನಿನ್ನ ಮಕ್ಕಳು ಕಲ್ಲಾಗಲಿ'.ಇನ್ನೆಂದೂ ನಿನ್ನ ಮುಖ ನೋಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿ ಹಿಂತಿರುಗುತ್ತಾಳೆ. ಅಕ್ಕ–ತಂಗಿ ದೂರವಾದ ಪರಿಣಾಮ ಊರಿನ ಜನರ ಉಲ್ಲಾಸ ಕುಗ್ಗುತ್ತದೆ. ಏನಾದರೂ ಮಾಡಿ ಅಕ್ಕ–ತಂಗಿಯರನ್ನು ಪುನ: ಭೇಟಿ ಮಾಡಿಸಬೇಕೆಂದು ನವದುರ್ಗೆಯರಲ್ಲಿ ಹಿರಿಯಳಾದ ಏಕನಾಥೇಶ್ವರಿಗೆ ಮೊರೆ ಹೋಗುತ್ತಾರೆ.

ಏಕನಾಥೇಶ್ವರಿ ಊರಿನ ಒಳಿತಿಗಾಗಿ ಭಕ್ತರ ಸಂತೋಷಕ್ಕಾಗಿ ವರ್ಷಕ್ಕೊಮ್ಮೆಯಾದರೂ ನಿಶ್ಚಿತ ಸ್ಥಳದಲ್ಲಿ ತನ್ನ ಸಮ್ಮುಖದಲ್ಲಿ ಅಕ್ಕ–ತಂಗಿಯರ ಭೇಟಿಯಾಗಬೇಕೆಂದು ಆದೇಶಿಸುತ್ತಾಳೆ. ಹಿರಿ ಅಕ್ಕನ ಅಣತಿಯಂತೆ ಪ್ರತಿ ವರ್ಷ ಅಕ್ಕ–ತಂಗಿಯರು ನಗರದ ಹಾಗೂ ಸುತ್ತಮುತ್ತಲಿನ ಹತ್ತಾರು ಹಳ್ಳಿಗಳ ಭಕ್ತರ ಮನೆಗಳಲ್ಲಿ ಎಂಟು ದಿನಗಳ ಕಾಲ ಪೂಜೆ ಸ್ವೀಕರಿಸಿ ಆನಂದದಿಂದ ಭಕ್ತರ ಮೊರೆಗೆ ಮನಸೋತು ಅಪಾರ ಭಕ್ತರ ನಡುವೆ ನಗರದ ದೊಡ್ಡಪೇಟೆಯಲ್ಲಿ ಭೇಟಿಯಾಗುತ್ತಾರೆ. ಈ ಭೇಟಿಯನ್ನು ಬೆಟ್ಟದ ತುದಿಯಲ್ಲಿ ನಿಂತು ಏಕನಾಥೇಶ್ವರಿ ವೀಕ್ಷಿಸುತ್ತಾಳೆಂದು ಪ್ರತೀತಿ ಇದೆ. ಜನಪದ ಹಿನ್ನೆಲೆಯ ಈ ಭೇಟಿ ಉತ್ಸವ ನಗರದ ಸಾಂಸ್ಕೃತಿಕ ಹಬ್ಬವೆನಿಸಿದೆ.

ಚಿತ್ರದುರ್ಗ ನಗರದ ರಾಜಬೀದಿ ದೊಡ್ಡಪೇಟೆಯಲ್ಲಿ ಮೇ.07ಕ್ಕೆ ಆಯೋಜಿಸಿರುವ ಅಕ್ಕ ತಂಗಿಯರ ಐತಿಹಾಸಿಕ ಭೇಟಿ ಉತ್ಸವಕ್ಕೆ ಸಕಲ ಸಿದ್ಧತೆ ನಡೆದಿದೆ. ಜನಪದ ಸೊಗಡಿನ ಹಿನ್ನೆಲೆ ಹೊಂದಿರುವ ಈ ಭೇಟಿ ಉತ್ಸವ ಪ್ರತಿವರ್ಷ ಶ್ರೀ ಏಕನಾಥೇಶ್ವರಿ ಅಮ್ಮನವರ ಉತ್ಸವದ ನಂತರ ಮೊದಲ ಮಂಗಳವಾರ ನಡೆಯುವುದು ವಾಡಿಕೆ. ಅದರಂತೆ ಇಂದು ನಡೆಯಲಿರುವ ಭೇಟಿ ಉತ್ಸವಕ್ಕೆ ರಾಜಬೀದಿ ದೊಡ್ಡಪೇಟೆಯಲ್ಲಿ ತಳಿರು ತೋರಣಗಳಿಂದ ಸಿಂಗರಿಸಲಾಗಿದೆ.ರಾಜ ಉತ್ಸವಾಂಬ ಉಚ್ಚಂಗಿ ಯಲ್ಲಮ್ಮ ದೇವಸ್ಥಾನದಿಂದ ರಂಗಯ್ಯನ ಬಾಗಿಲಿನವರೆಗೂ ರಸ್ತೆಯ ಎರಡೂ ಬದಿಗಳಲ್ಲಿ ಸಾರ್ವಜನಿಕರು ಭೇಟಿ ಉತ್ಸವ ವೀಕ್ಷಿಸಲು ಬ್ಯಾರಿಕೇಡ್ ನಿರ್ಮಿಸಲಾಗಿದೆ.

ಭೇಟಿ ಉತ್ಸವ ಸಮಿತಿಯಿಂದ ಉತ್ಸವಕ್ಕೆ ಬೇಕಾದ ಎಲ್ಲರೀತಿಯ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಜತೆಗೆ ಪ್ರತಿ ವರ್ಷದಂತೆ ನಗರಸಭೆಯಿಂದ ಸ್ವಚ್ಛತಾ ಕಾರ್ಯ, ನೀರಿನ ಸೌಕರ್ಯ, ಹೆಚ್ಚಿನ ವಿದ್ಯುತ್ ದೀಪಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ. ಮಹೋತ್ಸವ ನಡೆಯುವ ಸ್ಥಳದಲ್ಲಿ ಮೇ.7ರ ಬೆಳಗ್ಗೆಯಿಂದ ಆಕರ್ಷಕ ಅಲಂಕಾರ ನಡೆಯಲಿದ್ದು, ಭೇಟಿಯಾಗುವ ನಿಗದಿತ ಸ್ಥಳದಲ್ಲಿ ಓಂ ಚಿಹ್ನೆಯ ಆಕಾರದಲ್ಲಿ ನಾನಾ ಪುಷ್ಪಗಳಿಂದ ಹಾಗೂ ಮೇಲ್ಭಾಗದಲ್ಲಿ ಮಿನುಗುವ ವರ್ಣಮಯ ವಸ್ತುಗಳಿಂದ ಸಿಂಗರಿಸಲಾಗುವುದು.

# ತುರ್ತು ಕ್ರಮಕ್ಕೆ ಕಂದಾಯ ಇಲಾಖೆ ಸಜ್ಜು


» **ಚಳ್ಳಕೆರೆ**

ರಾಜ್ಯಾದ್ಯಂತ ಕೆಲವೇ ದಿನಗಳಲ್ಲಿ ಬಾರಿಪ್ರಮಾಣದ ಗುಡುಗು, ಸಿಡಿಲಿನಿಂದ ಕೂಡಿದ ಮಳೆ ಪ್ರಾರಂಭವಾಗಿ ಕೆಲವಾರು ದಿನಗಳ ಕಾಲ ನಿರಂತರ ಮಳೆ ಸುರಿಯಲಿದೆ ಎಂಬ ಮಾಹಿತಿಯನ್ನು ಹವಾಮಾನ ಇಲಾಖೆ ಈಗಾಗಲೇ ಸ್ಪಷ್ಟಪಡಿಸಿದ ಹಿನ್ನೆಲೆಯಲ್ಲಿ ಕಂದಾಯ ಇಲಾಖೆ ಹಿರಿಯ ಅಧಿಕಾರಿಗಳ ಸೂಚನೆ ಮೇರೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಹಶೀಲ್ದಾರ್‌ಗೆ ಮಾಹಿತಿ ನೀಡಿ, ಗುಡುಗು, ಸಿಡಿಲಿನಿಂದ ಆಗುವ ನಷ್ಟ, ಪ್ರಾಣಹಾನಿಯ ಬಗ್ಗೆ ಜಾಗೃತರಾಗಿರುವಂತೆ ನಿರ್ದೇಶನ ನೀಡಲಾಗಿದೆ ಎಂದು ತಹಶೀಲ್ದಾರ್ ರೇಹಾನ್ ಪಾಷ ತಿಳಿಸಿದರು.

ಈ ಬಗ್ಗೆ ಮಾಹಿತಿ ನೀಡಿದ ಅವರು, ರಾಜ್ಯ ಕಂದಾಯ ಇಲಾಖೆ ಪ್ರಧಾನಕಾರ್ಯದರ್ಶಿ ಮತ್ತು ಉಪಕಾರ್ಯದರ್ಶಿಯವರ ಸೂಚನೆ ಮೇರೆಗೆ ಜಿಲ್ಲಾಧಿಕಾರಿಗಳು ಈಗಾಗಲೇ ಗುಡುಗು, ಸಿಡಿಲು ಸಂಭವಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡಿದ್ದಾರೆ. ವಿವಿಧ ಆಯಾಮಗಳಲ್ಲಿ ಗುಡುಗು, ಸಿಡಿಲಿನಿಂದ ಆಗುವ ಪರಿಣಾಮಗಳನ್ನು ನಿರೀಕ್ಷಿಸಿ ಅವುಗಳಿಗೆ ಪರಿಹಾರವನ್ನು ಕಂಡುಕೊಳ್ಳುವಂತೆ ಮಾಹಿತಿ ನೀಡಿದ್ದಾರೆ.



ಈ ಹಿನ್ನೆಲೆಯಲ್ಲಿ ಈಗಾಗಲೇ ತಾಲ್ಲೂಕಿನಾದ್ಯಂತ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಮುನ್ನೆಚ್ಚರಿಕೆ ಕ್ರಮ ಅನುಸರಿಸುವ ಬಗ್ಗೆ ಸೂಚನೆ ನೀಡಿದೆ. ಸಂಬಂಧಪಟ್ಟ ಕಂದಾಯ ಇಲಾಖೆ ಅಧಿಕಾರಿಗಳು ಈಗಾಗಲೇ ಗ್ರಾಮ ಲೆಕ್ಕಾಧಿಕಾರಿಗಳಿಗೆ ಮಾಹಿತಿ ನೀಡಿ, ಇಂತಹ ಸಂದರ್ಭದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಸ್ಥಳದಲ್ಲೇ ಇದ್ದು, ಇಲಾಖೆಗೆ ಸೂಕ್ತ ಮಾಹಿತಿ ಹಾಗೂ ಕ್ರಮ ಕೈಗೊಂಡ ಬಗ್ಗೆ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ಕಳಿಸಿಕೊಡುವಂತೆ ಸೂಚನೆ ನೀಡಿದೆ ಎಂದರು.



ದಾವಣಗೆರೆ ಯುವ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಎಂ.ರಮೇಶ್, ಉತ್ತರ ಅಧ್ಯಕ್ಷ ಪಿ.ರಮೇಶ್, ತಾಲೂಕು ಖಜಾಂಚಿ ಪ್ರವೀಣ್ ಕುಮಾರ್, ವೀರ ಮದಕರಿ ಸೇನೆ ಜಿಲ್ಲಾ ಉಪಾಧ್ಯಕ್ಷ ಬನ್ನಿಕೋಡು ಕುಮಾರ್ ಅವರು ಸಂಸದ ಜಿ.ಎಂ.ಸಿದ್ದೇಶ್ವರ್ ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆಗೊಂಡರು. ಬಿಜೆಪಿ ಮುಖಂಡ ಕೊಳೇನಹಳ್ಳಿ ಸತೀಶ್, ಲಾಯರ್ ರಾಘವೇಂದ್ರ, ದಿನಾಕರ್ ಇದ್ದರು.

# ಬರ ಪರಿಹಾರ ಕುರಿತು ಪ್ರಗತಿ ಪರಿಶೀಲನಾ ಸಭೆ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಕೆಸ್ವಾನ್ ವಿಡಯೋ ಸಭಾಂಗಣದಲ್ಲಿ ಸೋಮವಾರ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅವರ ಅಧ್ಯಕ್ಷತೆಯಲ್ಲಿ ಬರಪರಿಹಾರ ಹಾಗೂ ಪ್ರಕೃತಿ ವಿಕೋಪ ವಿಷಯಗಳಿಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಬರ ಪರಿಸ್ಥಿತಿ ನಿರ್ವಹಣೆ ಕುರಿತು ಕೈಗೊಂಡಿರುವ ಕ್ರಮಗಳ ಕುರಿತು, ಬಾಕಿ ಬೆಳೆಹಾನಿ ಪರಿಹಾರ ವಿತರಣೆ, ಮುಂಗಾರು–2024ಕ್ಕೆ ಸಂಬಂಧಿಸಿದಂತೆ ಜಿಲ್ಲೆಗಳಲ್ಲಿ ಕೈಗೊಂಡಿರುವ ಪೂರ್ವಸಿದ್ಧತೆಗಳ ಕುರಿತು ಹಾಗೂ ಗುಡುಗು ಸಿಡಿಲು, ಮಳೆ ಮತ್ತು ಇತರೆ ಪ್ರಕೃತಿ ವಿಕೋಪದಿಂದ ಉಂಟಾಗುವ ಹಾನಿಯನ್ನು ತಡೆಯಲು ಕೈಗೊಂಡ ಕ್ರಮಗಳು ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸೇರಿದಂತೆ ತಹಶೀಲ್ದಾರ್‌ಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಕಾರ್ಯಪಾಲಕ ಅಭಿಯಂತರರು, ತೋಟಗಾರಿಕೆ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಇದ್ದರು.

### ಅಂಚೆ ಅದಾಲತ್

» **ಚಿಕ್ಕಮಗಳೂರು**

ಚಿಕ್ಕಮಗಳೂರು ಅಂಚೆ ಇಲಾಖೆ ವತಿಯಿಂದ ಮೇ 13 ರಂದು ಸಂಜೆ 4.00 ಗಂಟೆಗೆ ನಗರದ ಅಂಚೆ ಅಧೀಕ್ಷಕರ ಕಛೇರಿಯಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳನ್ನು ಹಾಗೂ ಗ್ರಾಹಕರುಗಳ ವ್ಯತ್ಯಯ ಸ್ವೀಕರಿಸಲು ಅಂಚೆ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ.


**ಪ್ರಮುಖ ಸುದ್ದಿ**

# ಪೌರಾಣಿಕ ನಾಟಕಗಳು ಭಾರತೀಯ ಸಂಸ್ಕೃತಿಯ ಪ್ರತೀಕ

» **ಹೊಸದುರ್ಗ**

ಭಾರತೀಯ ಸನಾತನ ಇತಿಹಾಸದಲ್ಲಿ ಪುರಾಣಿಕ ನಾಟಕಗಳು ಜನಮಾನಸದಲ್ಲಿ ಹೆಚ್ಚು ಪ್ರಭಾವ ಬೀರಿವೆ. ರಾಮಾಯಣ ಮತ್ತು ಮಹಾಭಾರತದಂತಹ ಪೌರಾಣಿಕ ಮಹಾಕಾವ್ಯಗಳಲ್ಲಿ ಬಿತ್ತರವಾಗುವ ಪಾತ್ರಗಳು ಪ್ರಸ್ತುತ ಜನಮಾನಸದಲ್ಲಿ ಹೆಚ್ಚಿನ ಪ್ರಭಾವ ಬೀರುವೆ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕ ಡಿ.ಎಸ್.ಪ್ರದೀಪ್ ತಿಳಿಸಿದರು.

ಹೊಸದುರ್ಗ ನಗರದ ಗ್ರಾಮದೇವತೆ ಶ್ರೀ ದುರ್ಗಾಂಬಿಕಾದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಸ್ಥಳೀಯ ಕಲಾವಿದರಿಂದ ದೇವಿಯ ಜಾತ್ರೆ ಪ್ರಯುಕ್ತ ನಡೆಯಲಿರುವ ಕುರುಕ್ಷೇತ್ರ ನಾಟಕದ ಬಿತ್ತಿಪತ್ರ ಅನಾವರಣಗೊಳಿಸಿ ಅವರು ಮಾತನಾಡಿ, ಪ್ರಸ್ತುತ ಧಾರಾವಾಹಿಗಳನ್ನ ನೋಡುವ ಜನರು ಹೆಚ್ಚಾಗಿದ್ದು, ಧಾರಾವಾಹಿ ಮತ್ತು ಸಿನಿಮಾಗಳಿಗಿಂತ ಹೆಚ್ಚು ಪ್ರಭಾವಶಾಲಿಯಾಗಿರುವ ಪೌರಾಣಿಕ ನಾಟಕಗಳನ್ನ ನೋಡುವವರ ಸಂಖ್ಯೆ ಹೆಚ್ಚಾದಾಗ ಕುಟುಂಬ ನೆಮ್ಮದಿಯಿಂದ ಇರಲು ಸಾಧ್ಯ. ಮಹಾಭಾರತದಲ್ಲಿ ಕೌರವರು ಮತ್ತು ಪಾಂಡವರ ಕುರಿತಾದ ಪಾತ್ರಗಳು ಧರ್ಮ ಮತ್ತು ಅಧರ್ಮದ ಮೂಲವನ್ನ ಸಾರುತ್ತವೆ ಎಂದರು.



ಶ್ರೀಕೃಷ್ಣನ ಪಾತ್ರಧಾರಿಯಾಗಿ ಹೊಸದುರ್ಗದ ಹಿರಿಯ ಕಲಾವಿದರಾದ ಸುಬ್ಬಣ್ಣನವರು ನೂರಾರು ನಾಟಕಗಳಲ್ಲಿ ಅಭಿನಯಿಸಿ ಅತ್ಯಂತ ಜನಮನ್ನಣೆಗೆ ಪಾತ್ರರಾಗಿದ್ದಾರೆ. ಸುಬ್ಬಣ್ಣನವರ ನೇತೃತ್ವದ ಸ್ಥಳೀಯ ಹಿರಿಯ ಕಲಾವಿದರ ತಂಡ ಇದೇ ಏ.7 ಮಂಗಳವಾರದಂದು ಹೊಸದುರ್ಗದ ದೇವರ ದಾಸಿಮಯ್ಯ ಮಾರುಕಟ್ಟೆ ಆವರಣದಲ್ಲಿ ಕುರುಕ್ಷೇತ್ರ ನಾಟಕವನ್ನು ಅಭಿನಯಿಸುತ್ತಿರುವುದು ಅತ್ಯಂತ ಸಂತಸ ತಂದಿದೆ. ಈ ನಾಟಕವನ್ನು ನೋಡಲು ನಗರದ ಜನರು ಕಾತುರದಿಂದ ಕಾಯುತ್ತಿದ್ದು ಬರುವ ವಿಶೇಷ ರಂಗ ಸಂಚಿಕೆಯಲ್ಲಿ ಕುರುಕ್ಷೇತ್ರ ಅರ್ಥಾತ್ ಶ್ರೀ ಕೃಷ್ಣ ಸಂಧಾನ ನಾಟಕ ಹೊಸದುರ್ಗ ನಗರದಲ್ಲಿ ಮೂಡಿ ಬರಲಿದ್ದು ಎಲ್ಲಾ ಸಂಗೀತ ಅಭಿಮಾನಿಗಳು ಈ ಕಾರ್ಯಕ್ರಮಕ್ಕೆ ಆಗಮಿಸಿ ತಮ್ಮ ಬದುಕಿಗೆ ಬೇಕಾದ ಅನುಭವಗಳನ್ನು ಪಡೆದುಕೊಳ್ಳಬೇಕು ಎಂದರು.ತಾಲೂಕು ಭೋವಿ ಸಮಾಜದ ಅಧ್ಯಕ್ಷ ಗುತ್ತಿಗೆದಾರ ಸುಬ್ಬಾಭೋವಿ ಮಾತನಾಡಿ, ನನ್ನ ಜೀವನದಲ್ಲಿ ಶ್ರೀಕೃಷ್ಣನ ಪಾತ್ರಧಾರಿಯಾಗಿ ಹತ್ತಾರು ಬಾರಿ ಕುರುಕ್ಷೇತ್ರ ನಾಟಕದಲ್ಲಿ ಅಭಿನಯ ಮಾಡಿದ್ದೇನೆ. ಪೌರಾಣಿಕ ನಾಟಕಗಳು ಸಮಾಜದ ಅಂಕುಡೊಂಕು ಸಂಸ್ಕೃತ ಜೀವನ ನಡೆಸಲು ದಾರಿದೀಪವಾಗಿವೆ. ವರ್ಷಕ್ಕೆ ಒಮ್ಮೆಯಾದರೂ ಕುರುಕ್ಷೇತ್ರ ನಾಟಕದಲ್ಲಿ ಅಭಿನಯಿಸಲು ಕಾತುರದಿಂದ ಕಾಯುತ್ತಿರುತ್ತೇನೆ. ಶ್ರೀ ಕೃಷ್ಣ ಪಾತ್ರಧಾರಿ ಆಗಿ ಅಭಿನಯಿಸಿ ಜನರ ಪ್ರೀತಿಗೆ ಪಾತ್ರರಾಗಿರುವುದು ನನ್ನ ಜೀವಿತ ಅವಧಿಯ ಅಭಿವೃದ್ಧಿಯ ನೆನಪಾಗಿದೆ ಎಂದರು.ಇದು ಇದೇ ಸಂದರ್ಭದಲ್ಲಿ ಕುರುಕ್ಷೇತ್ರ ನಾಟಕದ ಪಾತ್ರಧಾರಿಗಳಾದ ಮಾಜಿ ಪುರಸಭಾ ಸದಸ್ಯ ರಾಮಚಂದ್ರಪ್ಪ, ಗ್ರಾಪಂ ಸದಸ್ಯ ಲಂಕೆ ಹನುಮಂತಪ್ಪ. ಕಸಾಪ ತಾಲೂಕು ಘಟಕದ ಮಾಜಿ ಅಧ್ಯಕ್ಷ ಧನಂಜಯ ಮೆಂಗಸಂದ್ರ, ಹಿನ್ನೆಲೆ ಗಾಯಕ ಬಸವರಾಜ್, ಶಿವರುದ್ರಮೂರ್ತಿ, ಗೋಲ್ಡನ್ ವಾಯ್ಸ್ ರಾಘು, ಗುರುಪ್ರಸಾದ್, ತುಂಬಿನಕೆರೆ ಬಸವರಾಜ್ ಇದ್ದರು.

## ಫಾಸ್ಟ್ ನ್ಯೂಸ್

### ಪ್ರವೇಶ ಪರೀಕ್ಷೆ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 6ನೇ ತರಗತಿಗೆ ಪ್ರವೇಶಕ್ಕಾಗಿ ಮೇ.19ರಂದು ಬೆಳಿಗ್ಗೆ 11 ಗಂಟೆಗೆ ಪ್ರವೇಶ ಪರೀಕ್ಷೆ ಜರುಗಲಿದೆ. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ವಸತಿ ಶಾಲೆಗಳ ಪ್ರಾಂಶುಪಾಲರಿಂದ ಪ್ರವೇಶ ಪತ್ರಗಳನ್ನು ಪಡೆದು ಪ್ರವೇಶ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ. ಈ ಪರೀಕ್ಷೆಗೆ ಸಂಬಂಧಿಸಿದಂತೆ ಹಿರಿಯೂರು ತಾಲ್ಲೂಕು ದೇವರಕೊಟ್ಟ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಹಿರಿಯೂರು ನಗರದ ಕೆಎಸ್‌ಆರ್‌ಟಿಸಿ ಬಸ್ ಸ್ಟ್ಯಾಂಡ್ ಎದುರಿನ ಸರ್ಕಾರಿ ಬಾಲಕಿಯರ ಪಪೂ ಕಾಲೇಜು, ಚಳ್ಳಕೆರೆಯ ಶಾಂತಿನಗರದ ಸೈನಿಕ ಆಸ್ಪತ್ರೆ ಹತ್ತಿರದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ, ಚಳ್ಳಕೆರೆ ನಗರದ ತಾಲ್ಲೂಕು ಆಡಳಿತ ಕಚೇರಿ ಪಕ್ಕದ ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪೌಢಶಾಲೆ ಹಾಗೂ ಚಿತ್ರದುರ್ಗ ನಗರದ ನಿರ್ಮಿತಿ ಕೇಂದ್ರದ ಬಳಿ ಇರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಅನ್ನು ಪರೀಕ್ಷಾ ಕೇಂದ್ರಗಳಾಗಿ ಹಂಚಿಕೆ ಮಾಡಲಾಗಿದೆ. ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕೈಮಗ್ಗ ಮತ್ತು ಜವಳಿ ಇಲಾಖೆಯು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕೈಮಗ್ಗ ಉತ್ಪಾದನೆಗಳ ಅಭಿವೃದ್ಧಿಗಾಗಿ ಕೈಮಗ್ಗ ನೇಯ್ಗೆ ವೃತ್ತಿಯಲ್ಲಿ ನೈಪುಣ್ಯತೆ, ಶ್ರೇಷ್ಠತೆ, ತಾಂತ್ರಿಕತೆ, ಉತ್ಕೃಷ್ಟತೆಯ ಉತ್ಪನ್ನ ತಯಾರಿಸಿದ ಕೈಮಗ್ಗ ನೇಕಾರರಿಗೆ 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಇದೇ ಮೇ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಹರು ಕೈಮಗ್ಗ ಉತ್ಪಾದನೆಗಳ ಅಭಿವೃದ್ಧಿಗಾಗಿ ಕೈಮಗ್ಗ ನೇಯ್ಗೆಯ ಅಸಾಧಾರಣ ಕೌಶಲ್ಯದಲ್ಲಿ ಸುಮಾರು ಕನಿಷ್ಠ 30 ವರ್ಷ ಮೇಲ್ಪಟ್ಟವರು ಮತ್ತು ಕನಿಷ್ಠ 10 ವರ್ಷಗಳ ಅನುಭವ ಹೊಂದಿರಬೇಕು. ಆಸಕ್ತರು ಸೀರೆ, ಉಣ್ಣೆ ಕಂಬಳಿ ಉತ್ಪನ್ನದ ಮಾದರಿ ಬಣ್ಣದ ಛಾಯಾಚಿತ್ರ ಹಾಗೂ ವಿವಿಧ ಹಂತದ ವಿಡಿಯೋದೊಂದಿಗೆ ಅರ್ಜಿಯನ್ನು ಮೇ.31 ರೊಳಗೆ ಉಪನಿರ್ದೇಶಕರು, ಕೈ ಮಗ್ಗ ಮತ್ತು ಜವಳಿ ಇಲಾಖೆ, ಚಿತ್ರದುರ್ಗ ಇವರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08194-221426 ಗೆ ಸಂಪರ್ಕಿಸಬಹುದು.

### ಚಳ್ಳಕೆರೆ ತಾಲ್ಲೂಕಿನಲ್ಲಿ ವರುಣನ ಸಿಂಚನ

» **ಚಳ್ಳಕೆರೆ**

ರಾಜ್ಯ ಹವಾಮಾನ ಇಲಾಖೆ ನೀಡಿದ ಮುನ್ಸೂಚನೆಯಂತೆ ಈಗಾಗಲೇ ತಾಲ್ಲೂಕಿನ ಕೆಲವು ಕಡೆ ಪ್ರಸ್ತುತ ಮುಂಗಾರು ಮಳೆ ಆರಂಭವಾಗಿದೆ. ತಾಲ್ಲೂಕಿನ ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ರೇಣುಕಾಪುರ, ಸಿರಿವಾಳಓಬಳಾಪುರ, ಪಾತಪ್ಪನಗುಡಿ, ತಿಪ್ಪಾರೆಡ್ಡಿಹಳ್ಳಿ, ದೋಣೆಹಳ್ಳಿ ಮುಂತಾದ ಕಡೆಗಳಲ್ಲಿ ಸೋಮವಾರ ಸಂಜೆ ಮಳೆಯಾಗಿದ್ದು, ಮಳೆಯಾಗುತ್ತಿರುವುದನ್ನು ಕಂಡ ಸಂತೋಷದಿಂದ ಮನೆಯಿಂದ ಹೊರಗೆ ಬಂದು ಮಳೆರಾಯನ ಆಗಮನವನ್ನು ಕಣ್ತುಂಬಿಕೊಂಡರು. ಸಂಜೆ ಆರಂಭವಾದ ಮಳೆ ಕೆಲಹೊತ್ತು ಆಗಮಿಸಿದ್ದು, ರಸ್ತೆಯಲ್ಲಿ ನೀರು ಹರಿದಿದೆ. ಗ್ರಾಮೀಣ ಭಾಗದಲ್ಲಿ ಈಗಾಗಲೇ ಉರಿಯುವ ಬಿಸಿಲಿಗೆ ತತ್ತರಿಸಿದ್ದ ಜನತೆ ಒಂದುಕಡೆಯಾದರೆ, ಪ್ರಾಣಿ ಪಕ್ಷಿಗಳು ಸಹ ಸಕಾಲದಲ್ಲಿ ನೀರು, ಆಹಾರ ಸಿಗದೆ ಪರಿತಪಿಸುತ್ತಿದ್ದವು. ರೈತರು ಸಹ ಈ ಬಾರಿ ಮತ್ತೊಮ್ಮೆ ಮಳೆ ಕೈಕೊಟ್ಟಿದ್ದು, ಮುಂದಿನ ದಿನಗಳಲ್ಲಿ ರೈತ ಬದುಕು ಇಕ್ಕಟ್ಟಿಗೆ ಸಿಲುಕಲಿದೆ ಎಂಬ ಆತಂಕ ಅವರಲ್ಲಿ ಉಂಟಾಗಿತ್ತು. ಆದರೆ, ಭಗವಂತನ ಕೃಪೆಈ ಭಾಗದ ಜನರ ಮೇಲೆ ಇದೀಗತಾನೇ ಬಿದಿದ್ದು, ತಾಲ್ಲೂಕಿನ ಗಡಿಭಾಗದ ಗ್ರಾಮಗಳಲ್ಲಿ ಸಮದಾನ ತರುವಂತಹ ಮಳೆಯಾಗಿರುವುದು ಸಂತಸ ವಿಷಯವಾಗಿದೆ.

### ರಾಜ್ಯ ರೈತ ಸಂಘದ ಗ್ರಾಮೀಣ ಶಾಖೆ ಉದ್ಘಾಟನೆ

» **ಚಳ್ಳಕೆರೆ**

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ರೈತ ಸಂಘದ ಚಟುವಟಿಕೆಗಳನ್ನು ಇನ್ನಷ್ಟು ಕ್ರಿಯಾಶೀಲವಾಗಿ ವಿಸ್ತರಣೆ ಮಾಡುವ ದೃಷ್ಟಿಯಿಂದ ಗ್ರಾಮೀಣ ಭಾಗದ ಘಟಕಗಳ ಉದ್ಘಾಟನೆಗೆ ರೈತ ಸಂಘ ಈಗಾಗಲೇ ಸಿದ್ದತೆ ನಡೆಸಿದೆ ಎಂದು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ರಾಜ್ಯಾಧ್ಯಕ್ಷ ಕೋಡಿಹಳ್ಳಿಚಂದ್ರಶೇಖರ್ 9ರ ಗುರುವಾರ ಚಳ್ಳಕೆರೆಗೆ ಆಗಮಿಸಲಿದ್ದು, ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಳಿಯಲ್ಲಿ ರೈತ ಸಂಘದ ಗ್ರಾಮ ಘಟಕವನ್ನು ಉದ್ಘಾಟಿಸುವರು. ಇದೇ ದಿನ ಮಧ್ಯಾಹ್ನ 2.30ಕ್ಕೆ ತಳಕು ಹೋಬಳಿಯ ವರವು ಗ್ರಾಮದ ವಾಲ್ಮೀಕಿ ವೃತ್ತದ ಬಳಿ ಗ್ರಾಮ ಘಟಕ ಉದ್ಘಾಟನೆಯಾಗಲಿದೆ.

## ದಾವಣಗೆರೆ ಲೋಕಸಭಾ ಕ್ಷೇತ್ರ ಚುನಾವಣೆ

# 30 ಅಭ್ಯರ್ಥಿ, 17,09,244 ಮತದಾರರು

» **ದಾವಣಗೆರೆ**

ದಾವಣಗೆರೆ ಲೋಕಸಭಾ ಚುನಾವಣಾ ಮತದಾನ ಮೇ 7 ರಂದು ಬೆಳಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದ್ದು ಚುನಾವಣಾ ಕಣದಲ್ಲಿ 30 ಅಭ್ಯರ್ಥಿಗಳಿದ್ದು ಎಲ್ಲಾ ಕ್ಷೇತ್ರಗಳ ಮಸ್ಟರಿಂಗ್ ಕೇಂದ್ರಗಳಿಂದ ಮತಗಟ್ಟೆಗಳನ್ನು ಹೊತ್ತ ಸಿಬ್ಬಂದಿಗಳು ಮತಗಟ್ಟೆಯನ್ನು ತಲುಪಿದ್ದಾರೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.



ದಾವಣಗೆರೆ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರ ಸೇರಿ ವಿಜಯನಗರ ಜಿಲ್ಲೆಯ ಹರಪನಹಳ್ಳಿ ವಿಧಾನಸಭಾ ಕ್ಷೇತ್ರವು ದಾವಣಗೆರೆ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡಲಿದೆ. ಕ್ಷೇತ್ರದಲ್ಲಿ 851990 ಪುರುಷ, 857117 ಮಹಿಳೆ, 137 ಇತರೆ ಸೇರಿ 1709244 ಮತದಾರರಿದ್ದು 1946 ಮತಗಟ್ಟೆಗಳಿವೆ. ಕ್ಷೇತ್ರವಾರು ವಿವರದನ್ವಯ ಜಗಳೂರು 263 ಮತಗಟ್ಟೆಗಳಲ್ಲಿ 100046 ಪುರುಷ, 98759 ಮಹಿಳೆ, 10 ಇತರೆ ಸೇರಿ 198815 ಮತದಾರರಿದ್ದಾರೆ.

ಹರಪನಹಳ್ಳಿ 253 ಮತಗಟ್ಟೆಗಳಲ್ಲಿ 112969 ಪುರುಷ, 110985 ಮಹಿಳೆ ಹಾಗೂ 19 ಇತರೆ ಸೇರಿ 223973 ಮತದಾರರು. ಹರಿಹರ ಕ್ಷೇತ್ರದ 228 ಮತಗಟ್ಟೆಗಳಲ್ಲಿ 105510 ಪುರುಷ, 106870 ಮಹಿಳೆ, 17 ಇತರೆ ಸೇರಿ 212397 ಮತದಾರರು, ದಾವಣಗೆರೆ ಉತ್ತರ 245 ಮತಗಟ್ಟೆಗಳಲ್ಲಿ 124485 ಪುರುಷ, 128635 ಮಹಿಳೆ, 36 ಇತರೆ ಸೇರಿ 253156, ದಾವಣಗೆರೆ ದಕ್ಷಿಣ 217 ಮತಗಟ್ಟೆ, 109184 ಪುರುಷ, 111774 ಮಹಿಳೆ, 39 ಇತರೆ ಸೇರಿ 220997, ಮಾಯಕೊಂಡ 240 ಮತಗಟ್ಟೆಗಳಲ್ಲಿ 97759 ಪುರುಷ, 97326 ಮಹಿಳೆ, 4 ಇತರೆ ಸೇರಿ 195089, ಚನ್ನಗಿರಿ 255 ಮತಗಟ್ಟೆಗಳಲ್ಲಿ 101653 ಪುರುಷ, 102208 ಮಹಿಳೆ, 9 ಇತರೆ ಸೇರಿ 203870, ಹೊನ್ನಾಳಿ 245 ಮತಗಟ್ಟೆಗಳಲ್ಲಿ 100384 ಪುರುಷ, 100560 ಮಹಿಳೆ, 3 ಇತರೆ ಸೇರಿ 200947 ಮತದಾರರಿದ್ದಾರೆ.

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 1946 ಮತಗಟ್ಟೆಗಳಿದ್ದು ಇದರಲ್ಲಿ ಪ್ರತಿ ಮತಗಟ್ಟೆಯಲ್ಲಿ ಮತಗಟ್ಟೆ ಅಧ್ಯಕ್ಷಾಧಿಕಾರಿ, ಸಹಾಯಕ ಅಧ್ಯಕ್ಷಾಧಿಕಾರಿ, ಮತಗಟ್ಟೆ ಸಿಬ್ಬಂದಿ 2 ಸೇರಿ ಪ್ರತಿ ಮತಗಟ್ಟೆಗಳಲ್ಲಿ ಭದ್ರತಾ ಸಿಬ್ಬಂದಿ ಹೊರತುಪಡಿಸಿ 4 ಜನ ಮತದಾನ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಾರೆ. ಕ್ಷೇತ್ರದಲ್ಲಿ ಹೆಚ್ಚುವರಿ ಸೇರಿದಂತೆ ಒಟ್ಟು 8996 ಮತದಾನ ಸಿಬ್ಬಂದಿಗಳನ್ನು ನಿಯೋಜಿಸಿದ್ದು ಅವರು ಎಲ್ಲಾ ತಾಲ್ಲೂಕುಗಳ ಮಸ್ಟರಿಂಗ್ ಕೇಂದ್ರದಿಂದ ಇವಿಎಂ ನೊಂದಿಗೆ, ವಿವಿಪ್ಯಾಟ್, ಬ್ಯಾಲೆಟ್ ಯುನಿಟ್ ಸೇರಿದಂತೆ ಶಾಸನಬದ್ದ ಲಕೋಟೆಗಳು, ಶಾಸನಬದ್ದವಲ್ಲದ ಲಕೋಟೆಗಳೊಂದಿಗೆ ಮತಗಟ್ಟೆ ತಲುಪಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ 30 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದು ಬ್ಯಾಲೆಟ್ ಯುನಿಟ್‌ನಲ್ಲಿ 30 ಅಭ್ಯರ್ಥಿಗಳು ಮತ್ತು 1 ನೋಟಾ ಇರುತ್ತದೆ. ಕ್ರಮ ಸಂಖ್ಯೆವಾರು ಅಭ್ಯರ್ಥಿಗಳ ಹೆಸರು, ಪಕ್ಷ, ಚಿಹ್ನೆಯ ವಿವರ; 1. ಗಾಯಿತ್ರಿ ಸಿದ್ದೇಶ್ವರ ಭಾರತೀಯ ಜನತಾ ಪಾರ್ಟಿ ಕಮಲ, 2. ಡಾ. ಪ್ರಭಾ ಮಲ್ಲಿಕಾರ್ಜುನ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಕೈ, 3. ಡಿ.ಹನುಮಂತಪ್ಪ, ಬಹುಜನ ಸಮಾಜ ಪಾರ್ಟಿ ಆನೆ, 4. ಈಶ್ವರ ಶೇಂಗಾ ಉತ್ತಮ ಪ್ರಜಾಕೀಯ ಪಾರ್ಟಿ, ಚಪ್ಪಲಿಗಳು, 5.ಅಣಬೇರು ತಿಪ್ಪೇಸ್ವಾಮಿ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ ಆಟೋ-ರಿಕ್ಷಾ, 6. ಎಂ.ಪಿ.ಖಲಂದರ್, ಕಂಟ್ರಿ ಸಿಟಿಜನ್ ಪಾರ್ಟಿ, ತೆಂಗಿನ ತೋಟ

7. ದೊಡ್ಡೇಶಿ ಹೆಚ್.ಎಸ್, ಜನಹಿತ ಪಕ್ಷ, ಸ್ಟೆತೋಸ್ಕೋಪ್, 8.ರುದ್ರೇಶ್ ಕೆ.ಹೆಚ್, ಸಮಾಜ ವಿಕಾಸ ಕ್ರಾಂತಿ ಪಾರ್ಟಿ, ವಿದ್ಯುತ್ ಕಂಬ, 9.ವಿರೇಶ್.ಎಸ್ (ಲಯನ್ ವಿರೇಶ್) ರಾಣಿ ಚೆನ್ನಮ್ಮ ಪಾರ್ಟಿ, ಉಂಗುರ, 10. ಕೆ.ಎಸ್.ವೀರಭದ್ರಪ್ಪ, ಕರ್ನಾಟಕ ರಾಷ್ಟ್ರ ಸಮಿತಿ, ಬ್ಯಾಟರಿ ಟಾರ್ಚ್, 11. ಎಂ.ಜಿ.ಶ್ರೀಕಾಂತ್, ನವಭಾರತ ಸೇನಾ, ಬೆಂಕಿ ಪೊಟ್ಟಣ, 12. ಎಂ.ಸಿ.ಶ್ರೀನಿವಾಸ್, ಭಾರತೀಯ ಪ್ರಜಾಗಳ ಕಲ್ಯಾಣ ಪಕ್ಷ, ಏಳು ಕಿರಣಗಳಿರುವ ಪೆನ್ನಿನ ನಿಬ್, ಪಕ್ಷೇತರರಾದ 13. ಅಬ್ದುಲ್ ನಜೀರ್ ಅಹಮದ್, ರೋಡ್ ರೋಲರ್, 14. ಎ.ಕೆ.ಗಣೇಶ್, ಚಕ್ಕಿ, 15. ಜಿ.ಎಂ.ಗಾಯಿತ್ರಿ ಸಿದ್ದೇಶಿ, ಹೂಕೋಸು, 16. ಟಿ.ಚಂದ್ರು, ಗ್ರಾಮಫೋನ್, 17. ಟಿ.ಜಬೀನಾ ಆಪಾ, ಕಲ್ಲಂಗಡಿ, 18. ತಸ್ಲೀಮ್ ಬಾನು, ಬ್ಯಾಟ್, 19. ಪರವೀಜ್ ಹೆಚ್, ವಜ್ರ, 20. ಪೆದ್ದಪ್ಪ. ಎಸ್, ಕೇರಂಬೋರ್ಡ್, 21. ಬರಕತ್ ಅಲಿ, ಅಲಮಾರು, 22. ಜಿ.ಎಂ.ಬರ್ಕತ್ ಅಲಿ ಬಾಶ, ಗಿಫ್ಟ್ ಪ್ಯಾಕ್, 23. ಮಹಬೂಬ್ ಬಾಷ, ಸ್ಪಾನರ್, 24. ಮೊಹ್ಮದ್ ಹಯಾತ್. ಎಂ, ಪಕ್ಷೇತರ ಬ್ಯಾಟ್ಸ್‌ಮನ್

25. ಮಂಜು ಮಾರಿಕೊಪ್ಪ, ಟ್ರಕ್, 26. ರವಿನಾಯ್ಕ.ಬಿ, ಕರಣೆ, 27. ರಷೀದ್ ಖಾನ್, ದೂರವಾಣಿ, 28. ಜಿ.ಬಿ.ವಿನಯ್ ಕುಮಾರ್, ಗ್ಯಾಸ್ ಸಿಲಿಂಡರ್, 29. ಸಲೀಂ. ಎಸ್, ಪೆನ್‌ಡ್ರೈವ್ ಹಾಗೂ 30. ಸೈಯದ್ ಜಬೀವುಲಾ.ಕೆ, ಬಕೆಟ್ ಚಿಹ್ನೆಯಾಗಿದೆ.

ಮತದಾನಕ್ಕೆಪರ್ಯಾಯದಾಖಲೆಗಳಿಗೆ ಅವಕಾಶ; ಮತದಾರರ ಪಟ್ಟಿಯಲ್ಲಿ ಹೆಸರಿದ್ದು ಚುನಾವಣಾ ಗುರುತಿನ ಚೀಟಿ ತೋರಿಸಿ ಮತದಾನ ಮಾಡಬಹುದು. ಇದಲ್ಲದೇ ಆಧಾರ್ ಕಾರ್ಡ್, ನರೇಗಾ ಜಾಬ್ ಕಾರ್ಡ್, ಬ್ಯಾಂಕ್, ಅಂಚೆ ಕಚೇರಿಯಿಂದ ಪಡೆಯಲಾದ ಖಾತೆ ಪುಸ್ತಕದಲ್ಲಿ ಭಾವಚಿತ್ರ ಇದ್ದಲ್ಲಿ, ಕೇಂದ್ರ ಕಾರ್ಮಿಕ ಸಚಿವಾಲಯದಿಂದ ನೀಡಲಾದ ಆರೋಗ್ಯ ವಿಮಾ ಸ್ಮಾರ್ಟ್ ಕಾರ್ಡ್, ಚಾಲನಾ ಪರವಾನಗಿ, ಪಾನ್ ಕಾರ್ಡ್, ಆರ್‌ಜಿಐ ನಿಂದ ನೀಡಲಾದ ಸ್ಮಾರ್ಟ್ ಕಾರ್ಡ್, ಇಂಡಿಯನ್ ಪಾಸ್‌ಪೋರ್ಟ್, ಭಾವಚಿತ್ರವಿರುವ ಪೆನ್ಷನ್ ದಾಖಲೆ, ಸರ್ಕಾರಿ, ಅರೆ ಸರ್ಕಾರಿ, ಸಾರ್ವಜನಿಕ ಉದ್ದಿಮೆಗಳಲ್ಲಿನ ಭಾವಚಿತ್ರವಿರುವ ಗುರುತಿನ ಚೀಟಿ, ಅಧಿಕೃತವಾಗಿ ವಿತರಿಸಲಾದ ಲೋಕಸಭಾ, ವಿಧಾನಸಭಾ, ಪರಿಷತ್ ಸದಸ್ಯರ ಐಡಿ, ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯಿಂದ ನೀಡಲಾದ ದಿವ್ಯಾಂಗರ ಗುರುತಿನ ಚೀಟಿಗಳನ್ನು ನೀಡಿ ಮತದಾನ ಮಾಡಬಹುದಾಗಿದೆ.

**ಮಸ್ಟರಿಂಗ್ ನಡೆದ ಕೇಂದ್ರಗಳು;** ಜಗಳೂರು ಸರ್ಕಾರಿ ಪದವಿ ಪೂರ್ವ ಕಾಲೇಜು, ಹರಿಹರ ಸೆಂಟ್ ಮೇರಿಸ್ ಕಾನ್ವೆಂಟ್ ಸ್ಕೂಲ್, ದಾವಣಗೆರೆ ಉತ್ತರ ಡಿ.ಆರ್. ಆರ್.ವಿದ್ಯಾಸಂಸ್ಥೆ, ದಾವಣಗೆರೆ ದಕ್ಷಿಣ ಹೈಸ್ಕೂಲ್ ಮೈದಾನ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ಮಾಯಕೊಂಡ ಮೋತಿ ವೀರಪ್ಪ ಪದವಿ ಪೂರ್ವ ಕಾಲೇಜು, ಚನ್ನಗಿರಿ ಶ್ರೀ ಶ್ರೀ ಶಿವಲಿಂಗೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊನ್ನಾಳಿ ಗಂಗಮ್ಮ ಶ್ರೀ ವೀರಭದ್ರಶಾಸ್ತ್ರಿ ಕೈಗಾರಿಕಾ ತರಬೇತಿ ಕೇಂದ್ರ, ಹಿರೇಕಲ್ಮಠ ಇಲ್ಲಿ ಮಸ್ಟರಿಂಗ್ ನಡೆದಿದ್ದು ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ದಾವಣಗೆರೆ ಉತ್ತರ, ಮಾಯಕೊಂಡ, ಚನ್ನಗಿರಿ, ಹೊನ್ನಾಳಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿಯವರಿಂದ ಚನ್ನಗಿರಿಯಲ್ಲಿ ಸಖಿಮತಗಟ್ಟೆ ಪರಿಶೀಲನೆ; ಜಿಲ್ಲೆಯಲ್ಲಿ ಪ್ರತಿ ಕ್ಷೇತ್ರದಲ್ಲಿ 5 ಮತಗಟ್ಟೆಗಳನ್ನು ಸಖಿ ಮತಗಟ್ಟೆಯನ್ನಾಗಿ ಮಾಡಿ ಇಲ್ಲಿ ಮಹಿಳಾ ಸಿಬ್ಬಂದಿಗಳಿಂದ ನಿರ್ವಹಿಸಲ್ಪಡುವ ಮತಗಟ್ಟೆ ಇದಾಗಿದ್ದು ಎಲ್ಲಾ ಪಿಂಕ್ ಬಣ್ಣದಿಂದ ಕೂಡಿರುತ್ತದೆ. ಪಿಂಕ್ ಬಣ್ಣದಿಂದ ಸಿಂಗಾರಗೊಂಡಿರುವ ಮತಗಟ್ಟೆ, ಮತಗಟ್ಟೆಯಲ್ಲಿನ ಸಿಬ್ಬಂದಿಗಳು ಸಹ ಪಿಂಕ್ ಬಣ್ಣದ ಸ್ಯಾರಿಯನ್ನು ಧರಿಸಿರುತ್ತಾರೆ. ಚನ್ನಗಿರಿ ಪಟ್ಟಣದ ಬಿ.ಇ.ಓ ಕಚೇರಿ ಹಿಂಭಾಗದ ಸರ್ಕಾರಿ ಸಂಯುಕ್ತ ಬಾಲಕಿಯರ ಪ್ರೌಢಶಾಲೆಯಲ್ಲಿ ಇರುವ 169 ಮತಗಟ್ಟೆಯನ್ನು ಸಖಿ ಮತಗಟ್ಟೆಯನ್ನಾಗಿ ನಿರ್ಮಾಣ ಮಾಡಿಲಾಗಿದೆ. ಇಲ್ಲಿ ಪುರುಷ 608, ಮಹಿಳೆ 636 ಸೇರಿ ಒಟ್ಟು 1244 ಮತದಾರರಿದ್ದಾರೆ.

ವಿಶೇಷಚೇತನರ ಮತಗಟ್ಟೆ ಸಿಬ್ಬಂದಿಗಳಿಗೆ ವಿಶೇಷಗೌರವ; ಜಿಲ್ಲೆಯಲ್ಲಿ ತಲಾ 1 ಕ್ಷೇತ್ರದಲ್ಲಿ 1 ರಂತೆ ವಿಶೇಷಚೇತನರ ಮತಗಟ್ಟೆಯನ್ನು ಸ್ಥಾಪಿಸಲಾಗಿದ್ದು ಇಲ್ಲಿನ ಮತಗಟ್ಟೆ ಸಿಬ್ಬಂದಿಗಳು ವಿಶೇಷಚೇತನರಾಗಿರುತ್ತಾರೆ. ಇವರಿಗೆ ವಿಶೇಷ ವಾಹನ ಸೌಲಭ್ಯ ಕಲ್ಪಿಸಿದ್ದು ಇನ್ನೋವಾ ವಾಹನ ನೀಡಲಾಗಿದೆ. ಮತ್ತು ಮಸ್ಟರಿಂಗ್ ಮತ್ತು ಡಿ.ಮಸ್ಟರಿಂಗ್‌ನಲ್ಲಿ ಇವರಿಗೆ ಮೊದಲ ಆದ್ಯತೆಯನ್ನು ನೀಡಲಾಗುತ್ತದೆಯಲ್ಲದೇ ಬಹಳ ಗೌರವಯುತವಾಗಿ ನಡೆಸಿಕೊಳ್ಳುವ ಮೂಲಕಜಿಲ್ಲಾಧಿಕಾರಿಯವರುದಾವಣಗೆರೆ ಉತ್ತರ ಕ್ಷೇತ್ರದ ವಿಶೇಷಚೇತನರ ಮತಗಟ್ಟೆ ಸಿಬ್ಬಂದಿಗಳಿಗೆ ಹೂವಿನಹಾರ ಹಾಕುವ ಮೂಲಕ ಗೌರವಪೂರ್ವಕವಾಗಿ ಮತಗಟ್ಟೆಗೆ ಕಳುಹಿಸಿಕೊಟ್ಟರು.

## ಚುನಾವಣೆ ಮತದಾನ ಮುಕ್ತಾಯದ 48 ಗಂಟೆ ಅವಧಿಯ ಎಸ್‌ಓಪಿಯನ್ನು ಕಟ್ಟುನಿಟ್ಟಿನ ಪಾಲಿಸಿ

» **ದಾವಣಗೆರೆ**

ಲೋಕಸಭಾ ಚುನಾವಣಾ ಮತದಾನ ಮುಕ್ತಾಯವಾಗುವ 48 ಗಂಟೆಗಳ ಹಾಗೂ 24 ಗಂಟೆಗಳ ಅವಧಿಯಲ್ಲಿ ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು ಕಟ್ಟೆಚ್ಚರದಿಂದ ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.




ಅವರು ಭಾನುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾಮಾನ್ಯ ಚುನಾವಣಾ ವೀಕ್ಷಕರಾದ ಲಕ್ಷ್ಮೀ ಎಂ ಹಾಗೂ ವೆಚ್ಚ ವೀಕ್ಷಕರಾದ ಪ್ರತಿಭಾಸಿಂಗ್ ಅವರ ಉಪಸ್ಥಿತಿಯಲ್ಲಿ ನಡೆದ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದರು.

ಮತದಾನ ಮುಕ್ತಾಯವಾಗುವ 48 ಗಂಟೆಗಳ ಮೊದಲು ಎಲ್ಲಾ ಬಹಿರಂಗ ಪ್ರಚಾರಗಳು ಅಂತ್ಯವಾಗುವುದರಿಂದ ಯಾವುದೇ ಮೆರವಣಿಗೆ, ಸಭೆ, ಸಮಾರಂಭ ಇರುವುದಿಲ್ಲ. ಮತ್ತು ಗುಂಪು ಗುಂಪಾಗಿ ಚುನಾವಣಾ ಪ್ರಚಾರ ಮಾಡುವಂತಿಲ್ಲ. 144 ಸೆಕ್ಷನ್ ಜಾರಿ ಇದ್ದು 5 ಜನರಿಗಿಂತ ಹೆಚ್ಚು ಸೇರುವಂತಿಲ್ಲ, ಆದರೆ ಇದು ಮನೆ ಮನೆ ಪ್ರಚಾರಕ್ಕೆ ಅನ್ವಯವಾಗದಿದ್ದರೂ ಬೇರೆಯವರಿಗೆ ತೊಂದರೆಯಾಗಬಾರದು.

ಎಲ್ಲಾ ತಂಡಗಳು ಸಕ್ರಿಯ ಕಾರ್ಯನಿರ್ವಹಣೆಗೆ ಸೂಚನೆ; ಫ್ಲೈಯಿಂಗ್ ಸ್ಕ್ವಾಡ್, ವೀಡಿಯೋ ಸರ್ವಲೆನ್ಸ್ ಟೀಮ್, ಚೆಕ್‌ಪೋಸ್ಟ್, ಅಬಕಾರಿ ಸೇರಿದಂತೆ ಎಲ್ಲಾ ತಂಡಗಳು ಸಕ್ರಿಯವಾಗಿ ಕರ್ತವ್ಯ ನಿರ್ವಹಿಸಬೇಕು. ಫ್ಲೈಯಿಂಗ್ ಸ್ಕ್ವಾಡ್ ಚುನಾವಣಾ ಅಕ್ರಮಗಳ ಮೇಲೆ ಹದ್ದಿನ ಕಣ್ಣಿಡಲು ಮತ್ತು ಮತದಾರರಿಗೆ ಆಮಿಷ, ಕೊಡುಗೆ, ಹಣ, ಮದ್ಯ ಹಂಚಿಕೆಗಳ ಮೇಲೆ ತೀವ್ರ ನಿಗಾವಹಿಸಬೇಕೆಂದು ಸೂಚನೆ ನೀಡಿದರು.

ಮತಗಟ್ಟೆಯಲ್ಲಿ ಬಿ.ಎಲ್.ಓ ಮತ್ತು ಪಿ.ಆರ್.ಓ ಬಳಿ ಮಾತ್ರ ಮೊಬೈಲ್ ಇರಬೇಕು, ಚುನಾವಣಾ ಏಜೆಂಟರ ಬಳಿ ಮೊಬೈಲ್ ಇರಬಾರದು. ಮತದಾನದ ವಿವರ ಸಂಗ್ರಹಿಸಲು ಕ್ಷಣ ಕ್ಷಣದ ವರದಿಯನ್ನು ನೀಡಲು ಎಲ್ಲಾ ಕ್ಷೇತ್ರಗಳಲ್ಲಿ ತಂಡ ರಚನೆ ಮಾಡಿಕೊಂಡು ಅವರಿಗೆ ಸರಿಯಾದ ತರಬೇತಿ ನೀಡಲು ಸೂಚನೆ ನೀಡಿದರು.

ಚುನಾವಣಾ ವೀಕ್ಷಕರಾದ ಲಕ್ಷ್ಮೀ.ಎಂ ಮಾತನಾಡಿ ಮತಗಟ್ಟೆಯಲ್ಲಿ ನೀರಿನ ಸೌಕರ್ಯ ಇರಬೇಕು, ವಿಶೇಷಚೇತನರಿಗೆ ರ‍್ಯಾಂಪ್‌ಗಳು ಸರಿಯಾಗಿರಬೇಕು. ಏಜೆಂಟರ ಬಳಿ ಇರುವ ಮತದಾರರ ಪಟ್ಟಿ ಮತ್ತು ಚುನಾವಣಾ ಸಿಬ್ಬಂದಿಗಳ ಬಳಿ ಇರುವ ಪ್ರತಿ ಒಂದೇ ಇರುವಂತೆ ನೋಡಿಕೊಳ್ಳಬೇಕು. ಸಂವಹನಕ್ಕಾಗಿ ಎಲ್ಲ ಸಂಪರ್ಕಾಧಿಕಾರಿಗಳ ಮೊಬೈಲ್ ಸಂಖ್ಯೆ ಮತಗಟ್ಟೆ ಅಧಿಕಾರಿಯ ಬಳಿ ಇರುವಂತೆ ನೋಡಿಕೊಳ್ಳಬೇಕು. ಮತ್ತು ಯಾವುದೇ ಘಟನೆಗಳು ನಡೆದಾಗ ತಕ್ಷಣ ಪೊಲೀಸ್ ಸಿಬ್ಬಂದಿ ತಲುಪುವಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು. ವೆಚ್ಚ ವೀಕ್ಷಕರಾದ ಪ್ರತಿಭಾ ಸಿಂಗ್ ಮಾತನಾಡಿ 48 ಗಂಟೆಗಳ ಅವಧಿಯಲ್ಲಿ ಎಫ್. ಎಸ್.ಟಿ, ಎಸ್.ಎಸ್.ಟಿ.ಗಳ ಪಾತ್ರ ಬಹಳ ಮುಖ್ಯವಾಗಿದ್ದು ವಾರ್ ರೂಂಗಳಲ್ಲಿಯು ಸಕ್ರಿಯವಾಗಿ ಕರ್ತವ್ಯ ನಿರ್ವಹಿಸುವ ಮೂಲಕ ತೀವ್ರ ನಿಗಾ ವಹಿಸಬೇಕೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳು ಉಪಸ್ಥಿತರಿದ್ದರು.

## ಸಿ.ಟಿ.ರವಿ ಹೇಳಿಕೆಗೆ ಕುಮಾರ್ ಖಂಡನೆ

**ಚಿತ್ರದುರ್ಗ:** ಯಲ್ಲಾಪುರಲ್ಲಿ ಇತ್ತೀಚಿಗೆ ನಡೆದ ರಾಜಕೀಯ ಸಭೆ ಒಂದರಲ್ಲಿ ಮಾಜಿ ಸಚಿವ ಸಿ.ಟಿ.ರವಿ ಮೋಸ, ವಂಚನೆ, ಕಳ್ಳತನ ಮತ್ತು ದರೋಡೆಯನ್ನು ತಲೆ ಬೋಳಿಸುವುದಕ್ಕೆ ಹೋಲಿಕೆ ಮಾಡಿ ನಿಂದಿಸಿರುವುದು ಖಂಡನೀಯ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಹಾಗೂ ಸವಿತಾ ಸಮಾಜದ ಜಿಲ್ಲಾ ಕಾರ್ಯದರ್ಶಿ ಎನ್.ಡಿ.ಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಪತ್ರಿಕಾ ಹೇಳಿಕೆ ನೀಡಿರುವ ಅವರು ನಮ್ಮ ಸವಿತಾ ಕ್ಷೌರಿಕ ಸಮಾಜವನ್ನು ಅವಮಾನ ಮಾಡಲೇಬೇಕೆನ್ನುವ ಉದ್ದೇಶದಿಂದ ಬುದ್ಧಿ ಇಲ್ಲದ ರಾಜಕಾರಣಿ ಬಿ.ಜೆ.ಪಿಯ ಮಾಜಿ ಶಾಸಕ ಸಿ.ಟಿ.ರವಿಯವರು ದೇಶಭಕ್ತನಂತೆ ಪೋಸ್ ಕೊಡುವ ವ್ಯಕ್ತಿ ಈ ಭಾರತ ದೇಶದಲ್ಲಿ ಅವಿಭಾಜ್ಯ ಅಂಗವಾಗಿರುವ ಕ್ಷೌರಿಕ ವೃತಿಯ ಬಗ್ಗೆ ಕೀಳುಭಾವನೆ ಹೊಂದಿರುವ ಈತ ಯಾವ ದೇಶ ಭಕ್ತ. ಈತ ನಿಜಕ್ಕೂ ರಾಜಕೀಯ ನಾಯಕನಾಗುವುದಕ್ಕೆ ನಾಲಯಕ್ ಸೌಂದರ್ಯ ವರ್ದಕಗಳಿಂದ ಟ್ಯಾಕ್ಸ್ ಕಟ್ಟುತ್ತೆವೆ. ಇಂತಹ ಹಲವಾರು ವೃತ್ತಿಗಳಿಂದ ಬರುವ ಟ್ಯಾಕ್ಸನಿಂದ ಜೀವನ ನಡೆಸುವ ಇಂತಹ ರಾಜಕಾರಣಿಗಳು ಅನ್ನ ತಿನ್ನುವ ಬದಲು ಇನ್ನೇನಾದರೂ ತಿನ್ನುತ್ತಾರಾ? ಎಂದಿದ್ದಾರೆ. ಜವಾಬ್ದಾರಿ ಇಲ್ಲದ ಇಂತವರ ಹೇಳಿಕೆಯಿಂದ ಯಾರ ಹಂಗಿಲ್ಲದೆ ನಿಸ್ವಾರ್ಥದಿಂದ ಸ್ವಾಭಿಮಾನದಿಂದ ತಮ್ಮ ಬದುಕನ್ನು ಕಟ್ಟಿಕೊಂಡಿರುವ ಕ್ಷೌರಿಕ ಸವಿತಾ ಸಮಾಜದ ಕುಲ ಕಾಯಕಕ್ಕೆ ಧಕ್ಕೆ ಉಂಟಾಗಿದೆ ಎಂದು ಎನ್.ಡಿ.ಕುಮಾರ್ ಆಕ್ರೋಶ ವ್ಯಕ್ತ ಪಡಿಸಿ ಮಾತನಾಡಿ ಸಿ ಟಿ ರವಿಯವರೇ ತಾವು ಸುಂದರವಾಗಿ ಕಾಣುತ್ತಿದ್ದಿರಿ ಅಂದರೆ ಅದಕ್ಕೆ ಸವಿತಾ ಕ್ಷೌರಿಕ ಸಮಾಜ ಕಾರಣ ಅನ್ನೋದು ಮರೆಯಬೇಡಿ ಇದೊಂದು ಪುಣ್ಯದ ಕೆಲಸ. ಕರ್ಮಕಳೆಯುವ ಕೆಲಸ ದೇವರಿಗೆ ಹರಕೆಯ ಮುಡಿಯನ್ನು ಕೊಟ್ಟು ಭಕ್ತ ಸಂತುಷ್ಟನಾದ ಕೆಲಸ ಸಿ.ಟಿ ರವಿ ಅವರೇ ತಮ್ಮ ಮನೆಯ ಮಕ್ಕಳಿಗೆ ನಾಮಕರಣ ಮಾಡುವ ಮುಂಚೆ ತಲೆಯನ್ನು ಬೋಳಿಸಿ, ನಂತರ ನಾಮಕರಣ ಮಾಡುತ್ತೀರಾ, ಜನ್ಮದಾತರು ಕಾಲುವಾದಾಗ ಜನ್ಮದ ಕರ್ಮವನ್ನು ಕಳೆಯಲು ತಲೆ ಬೋಳಿಸಿಕೊಳ್ಳಿರಾ ತಮ್ಮ ಕಷ್ಟದ ಸಂದರ್ಭದಲ್ಲಿ ದೇವರಿಗೆ ಹರಕೆಯನ್ನು ಹೊತ್ತು ಹರಕೆಯನ್ನು ಸಲ್ಲಿಸುವುದು ಸಾಮಾನ್ಯ ವಿಷಯ ನೀವು ಸಹ ಹರಕೆಯನ್ನು ಸಲ್ಲಿಸಿದವರು ಇದ್ದೀರಾ ಆದರೂ ಸಹ ಇಂಥ ಪುಣ್ಯದ ಕೆಲಸವನ್ನ ನೀಚ ಲಂಪಟ ಮೋಸ ದರೋಡೆಗೆ ಹೋಲಿಕೆ ಮಾಡಿದ್ದು ಎಷ್ಟು ಸರಿ?

## ಪ್ರಮುಖ ಸುದ್ದಿ

### ಪಿಡಿಓಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಇಓ ಲಕ್ಷ್ಮಣ್

# ನೀರಿನ ಸಮಸ್ಯೆ ಉಲ್ಬಣವಾಗದಂತೆ ತುರ್ತು ಕ್ರಮ ಕೈಗೊಳ್ಳಿ

» **ಚಳ್ಳಕೆರೆ**

ಲೋಕಸಭಾ ಚುನಾವಣೆಯ ಜಂಜಾಟ ಮುಗಿದ ನಂತರ ತಾಲ್ಲೂಕು ಮಟ್ಟದ ಅಧಿಕಾರಿಗಳು ಈಗ ಜನರ ಸಮಸ್ಯೆಗಳ ಬಗ್ಗೆ ಗಮನಹರಿಸತೊಡಗಿದ್ದಾರೆ. ಚುನಾವಣೆಯ ನಂತರ ಮೊದಲ ಬಾರಿಗೆ ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್ ಮಾತನಾಡಿ, ರಾಜ್ಯ ಸರ್ಕಾರ ವಿಶೇಷವಾಗಿ ಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಕುರಿತು ಸಕರಾತ್ಮಕ ಚಿಂತನೆ ನಡೆಸಿದೆ. ಯಾವುದೇ ಕಾರಣಕ್ಕೂ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿಗಾಗಿ ಪರಿತಪಿಸದಂತೆ ಎಚ್ಚರಿಕೆ ವಹಿಸಬೇಕಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆ ಕರೆದಿದ್ದು, ಎಲ್ಲೇ ನೀರಿನ ಸಮಸ್ಯೆ ಇದ್ದಲ್ಲಿ ಅದನ್ನು ನಿಯಂತ್ರಿಸುವ ಜವಾಬ್ದಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳದ್ದು ಎಂದು ತಾಕೀತು ಮಾಡಿದರು. ತಾಲ್ಲೂಕಿನಲ್ಲಿ ಈ ಬಾರಿ ಮಳೆ ಆಗಮನ ವಿಳಂಬವಾಗಿದ್ದು, ಸರ್ಕಾರ ಮಾರ್ಗದರ್ಶನದಂತೆ ಯಾವ ಗ್ರಾಮದಲ್ಲಿ ಖಾಸಗಿಯವರ ಬೋರ್‌ವೆಲ್‌ನಲ್ಲಿ ನೀರು ಲಭ್ಯವಿದೆಯೋ ಅದನ್ನು ವಶಕ್ಕೆ ಪಡೆದ ಸಾರ್ವಜನಿಕರಿಗೆ ವಿತರಣೆ ಮಾಡುವಂತೆ ಸೂಚನೆ ನೀಡಲಾಗಿದೆ. ಈಗಾಗಲೇ ತಾಲ್ಲೂಕಿನಾದ್ಯಂತ ಒಟ್ಟು 18 ಸ್ಥಳಗಳಲ್ಲಿ ಖಾಸಗಿ ಬೋರ್‌ವೆಲ್‌ನೊಂದಿಗೆ ಒಪ್ಪಂದ ಮಾಡಿಕೊಂಡು ನೀರು ನೀಡಲಾಗುತ್ತಿದೆ. ಮಾಹೆಯಾನ ಅವರಿಗೆ 18 ಸಾವಿರ ಹಣ ಪಾವತಿ ಮಾಡಲಾಗುತ್ತಿದೆ ಎಂದರು.



ಕುಡಿಯುವ ನೀರು ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರ ದಯಾನಂದ ಮಾತನಾಡಿ, ತಾಲ್ಲೂಕಿನಾದ್ಯಂತ ಒಟ್ಟು 32 ಕಡೆ ಶುದ್ದಕುಡಿಯುವನೀರಿನಘಟಕದಲ್ಲಿಸಮಸ್ಯೆ ಉಂಟಾಗಿತ್ತು. ಅವುಗಳಲ್ಲಿ ಕೆಲವುಗಳನ್ನು ತುರ್ತು ರಿಪೇರಿ ಮಾಡಿಸಲಾಗಿದೆ. ಇನ್ನೂ ಕೆಲವು ರಿಪೇರಿಯಾಗದ ಸ್ಥಿತಿಯಲ್ಲಿವೆ. ಕೆಲವು ಗ್ರಾಮಗಳಲ್ಲಿ ನೀರು ಲಭ್ಯವಿದ್ದಲ್ಲಿ ಪೈಪ್‌ಲೈನ್ ಸಹ ಮಾಡಿಕೊಡಲಾಗಿದೆ. ಎಲ್ಲಿಯೇ ಸಮಸ್ಯೆ ಇರಲಿ ಅದನ್ನು ಗಮನಕ್ಕೆ ತರುವಂತೆ ಮನವಿ ಮಾಡಿದರು. ಸಹಾಯಕ ನಿರ್ವಾಹಣಾಧಿಕಾರಿ(ಕುಡಿಯುವ ನೀರು) ಸಂಪತ್‌ಕುಮಾರ್, ತಾಲ್ಲೂಕು ಯೋಜನಾಧಿಕಾರಿ ಕೆಂಚಪ್ಪ, ವಿವಿಧ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಅಧಿಕೃತವಾಗಿ ಮಾನ್ಯತೆ ಪಡೆದ ಶಾಲೆಗಳಿಗೆ ಮಾತ್ರ ಮಕ್ಕಳನ್ನ ಸೇರಿಸಲು ಬಿಇಓ ಮನವಿ

» **ಹೊಸದುರ್ಗ**



ತಮ್ಮ ತಮ್ಮ ಮಕ್ಕಳನ್ನ ಅಧಿಕೃತ ಶಾಲೆಗಳಿಗೆ ಮಾತ್ರ ಸೇರಿಸಲು ಕೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ತಾಲ್ಲೂಕಿನಲ್ಲಿ ಹಲವು ಕಡೆ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಸರ್ಕಾರದಿಂದ ಸೂಕ್ತ ಮಾನ್ಯತೆ ಪಡೆಯದೇ ಶಾಲೆ ನಡೆಯುತ್ತಿವೆ ಎಂಬ ಭಾವನೆ ಪೋಷಕರಲ್ಲಿರಬಹುದು, ಆದರೆ ಹೊಸದುರ್ಗ ತಾಲ್ಲೂಕಿನಲ್ಲಿ ಅಂತಹ ಅನಧಿಕೃತ ಶಾಲೆಗಳಿಲ್ಲ, ಎಲ್ಲವೂ ಸಹ ಅಧಿಕೃತ ಶಾಲೆಗಳೆ. ದಯಮಾಡಿ ಪೋಷಕರು ಶಾಲೆಗೆ ಮಕ್ಕಳನ್ನು ಸೇರಿಸುವಾಗ ಅಥವಾ ಒಂದು ಶಾಲೆಯಿಂದ ಇನ್ನೊಂದು ಶಾಲೆಗೆ ಮಕ್ಕಳನ್ನು ದಾಖಲಿಸುವಾಗ ಎಚ್ಚರಿಕೆ ವಹಿಸಬೇಕು. ತಾಲ್ಲೂಕಿನಲ್ಲಿ ರಾಜ್ಯ ಪಠ್ಯಕ್ರಮದ 29 ಶಾಲೆಗಳು ಹಾಗೂ ಸಿಬಿಎಸ್‌ಸಿ ಪಠ್ಯಕ್ರಮದ 05 ಶಾಲೆಗಳು ಅಂದರೆ 1. ಜ್ಞಾನಜ್ಯೋತಿ ಪಬ್ಲಿಕ್ ಶಾಲೆ ಚಿಕ್ಕಯಗಟಿ, 2. ಎಸ್. ನಿಜಲಿಂಗಪ್ಪ ಇಂಟರ್ನ್ಯಾಷನಲ್ ಶಾಲೆ ಹೊಸದುರ್ಗ, 3. ಆಕ್ಸ್‌ಫರ್ಡ್ ಇಂಟರ್ನ್ಯಾಷನಲ್ ಶಾಲೆ ಅರೇಹಳ್ಳಿ ಗೇಟ್, 4. ಇಂದಿರಾಗಾಂಧಿ ಇಂಟರ್ನ್ಯಾಷನಲ್ ಪಬ್ಲಿಕ್ ಶಾಲೆ ಬೋಕಿಕೆರೆ, 5.ರಾಮನ್ ಇಂಟರ್ನ್ಯಾಷನಲ್ ಪಬ್ಲಿಕ್ ಶಾಲೆ ಗೊರವಿಗೊಂಡನಹಳ್ಳಿ) ಶಾಲೆಗಳು ನೋಂದಣಿಯಾಗಿವೆ. ಈ ಶಾಲೆಗಳ ಹೆಸರು, ಆಡಳಿತ ಮಂಡಳಿ ವಿಳಾಸ, ಮಾಧ್ಯಮ, ಡೈಸ್ ಸಂಖ್ಯೆ, ನೋಂದಣಿ ಪಡೆದ ವರ್ಷ, ನೋಂದಣಿ ಪಡೆದ ಮಾಧ್ಯಮ, ಮಾನ್ಯತೆ ನವೀಕರಣ, ಅನುಮತಿ ಪಡೆದ ತರಗತಿಗಳು ಮತ್ತು ವಿಭಾಗಗಳು, ಪಠ್ಯ ಕ್ರಮದ ವಿವರಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಪುರಸಭೆ ಕಾರ್ಯಾಲಯ, ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ತಾಲ್ಲೂಕು ಕಚೇರಿಗಳಲ್ಲಿ ಪ್ರಕಟಣಾ ಫಲಕದಲ್ಲಿ 2024 ರ ಎಪ್ರಿಲ್ 24 ರಂದು ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟಿಸಲಾಗಿದೆ. ಈ ಶಾಲೆಗಳನ್ನು ಹೊರತುಪಡಿಸಿ ಇತರೆ ಯಾವುದೇ ಅನುದಾನ ರಹಿತ ಶಾಲೆಗಳಿಗೆ ಪೋಷಕರು ಮಕ್ಕಳನ್ನು ದಾಖಲಿಸಿದ್ದಲ್ಲಿ ಪೋಷಕರೇ ಹೊಣೆಗಾರರಾಗಿರುತ್ತಾರೆಎಂದುಎಚ್ಚರಿಕೆನೀಡಿರುವ ಅವರು ಶಾಲಾ ಶಿಕ್ಷಣ ಇಲಾಖೆ ಯಾವುದೇ ರೀತಿಯಿಂದಲೂ ಜವಾಬ್ದಾರಿಯಾಗಿರುವುದಿಲ್ಲ ಪೋಷಕರು ಅಧಿಕೃತವಾಗಿ ಮಾನ್ಯತೆ ಪಡೆದ ಶಾಲೆಗಳ ಬಗ್ಗೆ ಮಾಹಿತಿ ಪಡೆದು ಮಕ್ಕಳನ್ನು ದಾಖಲಿಸಬೇಕು ಎಂದು ಮನವಿ ಮಾಡಿದ್ದಾರೆ.

### ಗ್ರಾಮ ಕಲ್ಯಾಣ ಕಾಮಗಾರಿಗೆ ಸ್ವಾಮೀಜಿ ಸಮ್ಮುಖದಲ್ಲಿ 2 ಲಕ್ಷ ರೂಪಾಯಿ ಚೆಕ್ ವಿತರಣೆ



» **ಹೊಸದುರ್ಗ**

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅಡಿಯಲ್ಲಿ 2024–25ನೆಯ ಸಾಲಿನ ಗ್ರಾಮ ಕಲ್ಯಾಣ ಕಾರ್ಯಕ್ರಮದಂತೆ ತಾಲೂಕಿನ ಸಾಣೇಹಳ್ಳಿಯ ಹಾಲು ಉತ್ಪಾದಕರ ಸಂಘ/ಬಿ ಎಂ ಸಿ ರಚನಾ ಕಾಮಗಾರಿಗೆ ಡಾ. ವೀರೇಂದ್ರ ಹೆಗಡೆ, ಅಧ್ಯಕ್ಷರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ), ಧರ್ಮಸ್ಥಳ ಇವರ ಕಡೆಯಿಂದ ಮೇ 5 ರಂದು ಸಹಾಯಧನವನ್ನು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಗಳವರ ಸಮ್ಮುಖದಲ್ಲಿ 2 ಲಕ್ಷ ರೂಪಾಯಿ ಚೆಕ್‌ನ್ನು ನೀಡಲಾಯಿತು. ಮುಂದೆ ಸಾಣೇಹಳ್ಳಿಯ ಕೆರೆ ಅಭಿವೃದ್ಧಿ ಪಡಿಸಲಿಕ್ಕೆ ಬೇಕಾದ ಧನ ಸಹಾಯವನ್ನು ಮಾಡುತ್ತೇವೆಂದು ಶ್ರೀಕ್ಷೇತ್ರ ಧರ್ಮಸ್ಥಳದ ಗ್ರಾಮೀಣಾಭಿವೃದ್ಧಿ ಯೋಜನೆಯ ಸಂಯೋಜನಾಧಿಕಾರ ಚಂದ್ರಶೇಖರ್ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳದ ಗ್ರಾಮೀಣಾಭಿವೃದ್ಧಿ ಯೋಜನೆಯ ಸಂಯೋಜನಾಧಿಕಾರ ಚಂದ್ರಶೇಖರ್, ಆಗ್ರೋ ಹೆಚ್. ಶಿವಣ್ಣ, ಎ ಸಿ ಚಂದ್ರಪ್ಪ, ಸಾಣೇಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಲೋಕೇಶಯ್ಯ, ಕಾರ್ಯದರ್ಶಿ ಶಾಂತಲಿಂಗಪ್ಪ, ನಿರ್ದೇಶಕರುಗಳು ಹಾಗೂ ಮಹಿಳಾ ಸಂಘದ ಪದಾಧಿಕಾರಿಗಳು ಇದ್ದರು

### ಬೀಳ್ಕೊಡಿಗೆ

» **ಶಿವಮೊಗ್ಗ**

ನಗರದಬ್ಯಾಂಕ್‌ಆಫ್‌ಬರೋಡಶಿವಮೊಗ್ಗಕ್ಷೇತ್ರಿಯ ಕಚೇರಿಯ ಸಹಾಯಕ ಮಹಾ ಪ್ರಬಂಧಕರಾದ ಎಚ್. ಜಿ. ರವಿ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ, ರವಿ ದಂಪತಿಗಳನ್ನು ಬ್ಯಾಂಕ್ ಆಫ್ ಬರೋಡ ಎಂಪ್ಲಾಯಿಸ್ ಅಸೋಸಿಯೇಷನ್ ವತಿಯಿಂದ ರಾಷ್ಟ್ರೀಯ ಉಪಾಧ್ಯಕ್ಷರಾದ ಸುರೇಶ್ ಶೆಟ್ಟಿ, ಲವಕುಮಾರ್, ಕಾರ್ಯದರ್ಶಿ ಮಧು ಮೋಹನ ರವರು ಆತ್ಮೀಯವಾಗಿ ಬೀಳ್ಕೊಟ್ಟರು.

# ಬೆಳೆ ಸಮೀಕ್ಷೆ ವ್ಯತ್ಯಾಸ; ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಕ್ರಮ: ಡಿಸಿ

» **ಚಿತ್ರದುರ್ಗ**



ಬೆಳೆ ಸಮೀಕ್ಷೆಯಲ್ಲಿ ಉಂಟಾದ ವ್ಯತ್ಯಾಸದಿಂದ ಚಳ್ಳಕೆರೆ ತಾಲ್ಲೂಕಿನ ಸೋಮಗುದ್ದು, ಎನ್.ದೇವರಹಳ್ಳಿ ಗ್ರಾಮ ಪಂಚಾಯಿತಿ ಸೇರಿದಂತೆ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಬೆಳೆ ವಿಮೆ ಪರಿಹಾರ ಜಮೆ ಆಗದಿರುವುದು ಗಮನಕ್ಕೆ ಬಂದಿದೆ. ಈ ಭಾಗದ ರೈತರ ಜಮೀನುಗಳಲ್ಲಿ ಪುನಃ ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ರೈತರಿಗೆ ಭರವಸೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬೆಳೆವಿಮೆ ಸಂಬಂಧಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಳ್ಳಕೆರೆ ತಾಲ್ಲೂಕು ರಾಜ್ಯದಲ್ಲಿಯೇ ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶವಾಗಿದೆ. ಇಂತಹ ಸಂದರ್ಭದಲ್ಲಿ ತಾಲ್ಲೂಕಿನ ಕೆಲವು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಬೆಳೆವಿಮೆ ವಿತರಣೆಯಾಗದಿರುವುದು, ಬೆಳೆವಿಮೆ ಹಣ ಪಾವತಿಯಲ್ಲಿಯೂ ವ್ಯತ್ಯಾಸ ಆಗಿರುವುದು ಹಾಗೂ ಕಂಪ್ಯೂಟರ್ ಸೆಂಟರ್‌ಗಳಲ್ಲಿ ಡಾಟಾ ಎಂಟ್ರಿ ಮಾಡುವ ಸಂದರ್ಭದಲ್ಲಿ ಆಗಿರುವ ತಪ್ಪುಗಳು ಸಹ ಗಮನಕ್ಕೆ ಬಂದಿವೆ. ಬೆಳೆ ಸಮೀಕ್ಷೆಯ ಸಂದರ್ಭದಲ್ಲಿ ಆಗಿರುವ ವ್ಯತ್ಯಾಸದ ಕುರಿತು ಈಗಾಗಲೇ ಚರ್ಚಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ. ರೈತರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಪುನಃ ಪರಿಶೀಲಿಸಿ, ಬೆಳೆವಿಮೆ ಪರಿಹಾರಕ್ಕೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಬೆಳೆ ಸಮೀಕ್ಷೆ ಕ್ರಮಬದ್ಧವಾಗಿಲ್ಲ. ಮಳೆ ಆಶ್ರಿತ ಜಮೀನುಗಳಲ್ಲಿ ನಡೆಸಬೇಕಾದ ಬೆಳೆ ಕಟಾವು ಪ್ರಯೋಗವನ್ನು ನೀರಾವರಿ ಜಮೀನುಗಳ ಸರ್ವೆ ನಂಬರ್‌ಗಳಲ್ಲಿ ನಡೆಸಲಾಗಿದೆ. ಈ ಅಚಾತುರ್ಯ ಮಾಡಿದ ಪಿಡಿಓಗಳಿಗೆ ನೋಟಿಸ್ ನೀಡಲಾಗಿದೆ. ವರದಿ ಆಧರಿಸಿ ಇವರ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು. ಬೆಳೆ ಸಮೀಕ್ಷೆ ತಪ್ಪಿನಿಂದಾಗಿ ಇಡೀ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲ ಹಳ್ಳಿಗಳಿಗೂ ಪರಿಣಾಮ ಬೀರಿದೆ ಎಂದು ರೈತರು ಮಾಹಿತಿ ನೀಡಿದ್ದು, ಇದು ಅವೈಜ್ಞಾನಿಕ ಕ್ರಮವಾಗಿದೆ. ಈ ಕುರಿತು ಸೂಕ್ತ ಕ್ರಮಕೈಗೊಂಡು ಬೆಳೆ ನಷ್ಟ ಉಂಟಾದ ರೈತರಿಗೆ ಕಡ್ಡಾಯವಾಗಿ ಬೆಳೆವಿಮೆಪಾವತಿಗೆಕ್ರಮವಹಿಸಲಾಗುವುದು ಎಂದು ಹೇಳಿದರು.

ರೈತರ ಸಾಲದ ಖಾತೆಗೆ ಜಮೆ ಮಾಡದಂತೆ ಸೂಚನೆ: ರೈತರಿಗೆ ನೀಡುವ ಬೆಳೆವಿಮೆ, ಸರ್ಕಾರಿ ಸೌಲಭ್ಯ ಸೇರಿದಂತೆ ಸಾಮಾಜಿಕ ಭದ್ರತಾ ಯೋಜನೆಯ ಪಿಂಚಣಿ ಹಣವನ್ನು ರೈತರ ಸಾಲದ ಖಾತೆಗಳಿಗೆ ಜಮೆ ಮಾಡುವಂತಿಲ್ಲ. ಈಗಾಗಲೇ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚನೆ ನೀಡಿದ್ದು, ರೈತರ ಸಾಲದ ಖಾತೆಗೆ ಬೆಳೆವಿಮೆ ಹಣ ಜಮೆ ಮಾಡದಂತೆ ಕ್ರಮವಹಿಸಲಾಗಿದೆ. ಇದರ ಜೊತೆಗೆ ಬೆಳೆ ಪರಿಹಾರ ವಿತರಣೆಗೂ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಮಾತನಾಡಿ, ಚಳ್ಳಕೆರೆ ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ಹೊರತುಪಡಿಸಿ ಎಲ್ಲ ಪಂಚಾಯಿತಿಗಳಿಗೂ ಬೆಳೆವಿಮೆ ಹಣ ಬಂದಿದೆ.ಜಿಲ್ಲಾಧಿಕಾರಿಗಳನಿರ್ದೇಶನದಂತೆ ಬೆಳೆವಿಮೆ ಪಾವತಿಯಾಗದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಮತ್ತೊಮ್ಮೆ ಪರಿಶೀಲನೆ ನಡೆಸಿ ಸೂಕ್ತ ದಾಖಲೆಗಳೊಂದಿಗೆ ವಿಮಾ ಕಂಪನಿಗೆ ಆಗಿರುವ ಲೋಪದೋಷ ಸರಿಪಡಿಸಿ ಬೆಳೆವಿಮೆ ಪಾವತಿಸಲು ಸೂಚನೆ ನೀಡಲಾಗುವುದು ಎಂದರು.

ಜಿಲ್ಲೆಯ ರೈತರು ಬೆಳೆವಿಮೆ ಪಾವತಿಗೆ ರೂ.11.92 ಕೋಟಿ ಹಣ ಪಾವತಿಸಿದ್ದು, ಜಿಲ್ಲೆಗೆ ರೂ.284 ಕೋಟಿ ರೂಪಾಯಿ ಬೆಳೆವಿಮೆ ಹಣ ಬಂದಿದೆ. ಬೆಳೆವಿಮೆ ಹಣದ ಒಟ್ಟು ಮೊತ್ತದಲ್ಲಿ ಚಳ್ಳಕೆರೆ ತಾಲ್ಲೂಕಿಗೆ ಶೇ.51ರಷ್ಟು ಹಣ ಬಂದಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸೇರಿದಂತೆ ಸಾಂಖ್ಯಿಕ ಇಲಾಖೆ ಅಧಿಕಾರಿಗಳು, ಬೆಳೆವಿಮೆ ಪ್ರತಿನಿಧಿ, ರೈತರ ಸಂಘದ ಮುಖಂಡರಾದ ರೆಡ್ಡಿಹಳ್ಳಿ ವೀರಣ್ಣ, ಕೆ.ಪಿ.ಭೂತಯ್ಯ, ಚಿಕ್ಕಪನಹಳ್ಳಿ ರುದ್ರಸ್ವಾಮಿ, ಹಂಪಯ್ಯನಮಾಳಿಗೆ ಧನಂಜಯ, ಬ್ಯಾರಡಹಳ್ಳಿ ಶಿವಕುಮಾರ, ನಿವೃತ್ತ ಪ್ರಾಚಾರ್ಯ ಶಿವಲಿಂಗಪ್ಪ, ಮಲ್ಲಾಪುರ ತಿಪ್ಪೇಸ್ವಾಮಿ ಸೇರಿದಂತೆ ರೈತರು ಇದ್ದರು.

# ಮತದಾರರನ್ನು ಸ್ವಾಗತಿಸಲು ವಿಶೇಷ ಮತಗಟ್ಟೆ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಪ್ರಜಾಪ್ರಭುತ್ವದ ಮತದಾನ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಲು ಜಿಲ್ಲೆಯಾದ್ಯಂತ 63 ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಿ ಮತದಾರರನ್ನು ಆಕರ್ಷಿಸಲಾಗುತ್ತಿದೆ.

ವಿಶೇಷ ಮತಗಟ್ಟೆಗಳಲ್ಲಿ ಮಹಿಳಾ ಸಿಬ್ಬಂದಿಗಳಿಂದಲೇ ನಿರ್ವಹಿಸಲ್ಪಡುವ ಸಖಿ ಮತಗಟ್ಟೆ ಇವು ಜಿಲ್ಲೆಯಲ್ಲಿ 35 ಮತಗಟ್ಟೆಗಳು, ಧ್ಯೇಯ ಆಧಾರಿತ ಮತಗಟ್ಟೆಗಳಲ್ಲಿ ಅಡಿಕೆ, ಕೃಷಿ, ವೀಳ್ಯೆದೆಲೆ, ಸಂಚಾರ ನಿಯಂತ್ರಣ, ಜಲಸಂರಕ್ಷಣೆ, ಸ್ಕೌಟ್ ಅಂಡ್ ಗೈಡ್ಸ್, ಅರಣ್ಯ, ಅಂಗನವಾಡಿ, ಸಾಂಪ್ರದಾಯಿಕ ಮತಗಟ್ಟೆಗಳಲ್ಲಿ ಪರಿಸರ ಸ್ನೇಹಿ, ಲಂಬಾಣಿ ಸಂಸ್ಕೃತಿ, ಯಾದವ ಸಂಪ್ರದಾಯ, ಅಕ್ಕಿಪಿಕ್ಕಿ ಸಂಪ್ರದಾಯ ಸೇರಿದಂತೆ ಜನಜೀವನದ ಬಗ್ಗೆ ಗಮನ ಸೆಳೆಯುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ಯುವಕರಿಂದ ನಿರ್ವಹಿಸಲ್ಪಡುವ ಯುವ ಮತಗಟ್ಟೆಗಳು, ವಿಶೇಷಚೇತನರಿಂದ ನಿರ್ವಹಿಸಲ್ಪಡುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ದಾವಣಗೆರೆ ದಕ್ಷಿಣ ಕ್ಷೇತ್ರದ ಮತಗಟ್ಟೆ 169 ಜಾಲಿನಗರದ ಜನತಾ ವಿದ್ಯಾಲಯದಲ್ಲಿ ಪರಿಸರ ಸ್ನೇಹಿಗೆ ಒತ್ತು ನೀಡಲಾಗಿದೆ. ಇಲ್ಲಿ ಬಿಸಿಲಿಗೆ ತಂಪಾಗಿರಲು ಮಣ್ಣಿನಿಂದ ಮಾಡಿದ ಮನೆ, ಛಾವಣಿ ಮೇಲೆ ತೆಂಗಿನ ಗರಿ, ಮಣ್ಣಿನಿಂದ ಮಡಿಕೆ ತಯಾರಿಸುವ ಟಿಗರಿ, ಉಪಯೋಗಿಸುವ ಮಡಿಕೆಗಳ ಪ್ರದರ್ಶನ, ಬಾವಿಯ ಸಂರಕ್ಷಣೆ, ಪಕ್ಷಿಗಳಿಗೆ ನೀರುಣಿಸುವುದು, ಪ್ಲಾಸ್ಟಿಕ್ ಬದಲಾಗಿ ಬಿದಿರಿನಿಂದ ತಯಾರಿಸಿದ ಬೀಸಣಿಕೆ, ಬುಟ್ಟಿಗಳ ಉಪಯೋಗ, ಪ್ಲಾಸ್ಟಿಕ್ ಬ್ಯಾಗ್ ಬದಲಾಗಿ ಬಟ್ಟೆ ಬ್ಯಾಗ್‌ಗಳ ಉಪಯೋಗ ಮಾಡುವ ಮೂಲಕ ಪರಿಸರ ಸಂರಕ್ಷಣೆ ವಿಷಯಾಧಾರಿತ ಮತಗಟ್ಟೆಯಾಗಿದೆ. ಇದನ್ನು ಚಿತ್ರಕಲಾ ಪರಿಷತ್ ಕಲಾವಿದರು ನಿರ್ಮಾಣ ಮಾಡಿರುವರು.



ಜಿಲ್ಲಾಧಿಕಾರಿಹಾಗೂಜಿಲ್ಲಾಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಭೇಟಿ ನೀಡಿ ವೀಕ್ಷಣೆ ಮಾಡಿದರು.

**ಸಖಿ ಮತಗಟ್ಟೆಗೆ ಭೇಟಿ;** ದಾವಣಗೆರೆ ಉತ್ತರದ ಎಂ.ಸಿ.ಸಿ. ಬಿ.ಬ್ಲಾಕ್‌ನಲ್ಲಿನ ಮತಗಟ್ಟೆ 208 ರಲ್ಲಿ ಸಖಿ ಮತಗಟ್ಟೆಯನ್ನು ಸ್ಥಾಪಿಸಿದ್ದು ಇಲ್ಲಿ ಪಿಆರ್‌ಓ, ಎಪಿಆರ್‌ಓ, ಮತಗಟ್ಟೆ ಸಿಬ್ಬಂದಿಗಳು ಮಹಿಳೆಯರೇ ಆಗಿರುತ್ತಾರೆ. ಇಲ್ಲಿ 656 ಪುರುಷ, 671 ಮಹಿಳಾ ಮತದಾರರು ಸೇರಿ 1327 ಮತದಾರರಿದ್ದಾರೆ.

ದಾವಣಗೆರೆ ಉತ್ತರದ ಬೇತೂರು ಗ್ರಾಮ ಪಂಚಾಯತ್‌ನಲ್ಲಿನ 23 ರ ಸಖಿ ಮತಗಟ್ಟೆಯಲ್ಲಿ 564 ಪುರುಷ, 593 ಮಹಿಳಾ ಮತದಾರರು ಸೇರಿ 1157 ಮತದಾರರಿದ್ದಾರೆ. ಇಲ್ಲಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಭೇಟಿ ನೀಡಿ ವೀಕ್ಷಣೆ ಮಾಡಿ ಸಿದ್ದತೆಗಳ ಪರಿಶೀಲನೆ ನಡೆಸಿದರು.

ವಿಶೇಷ ಮತಗಟ್ಟೆಗಳ ವಿವರ; ಜಗಳೂರು ತಾ; ಮುಸ್ಟೂರು 238 ನೇ ಮತಗಟ್ಟೆಯಲ್ಲಿ ಧ್ಯೇಯ ಮಾದರಿ ಜಲಾನಯನ ಪ್ರಾತ್ಯಕ್ಷಿತೆ, ಮಳೆ ನೀರು ಸಂರಕ್ಷಣೆ ಮಾಡುವ ಬಗ್ಗೆ ವಿವರಿಸಲಾಗಿದೆ.

ದಾವಣಗೆರೆ ದಕ್ಷಿಣದ ಮತಗಟ್ಟೆ 139 ರಲ್ಲಿ ಜಯದೇವ ಹಾಸ್ಟೆಲ್ ಆನಗೋಡು ಮಠ ನರ್ಸರಿ ಮತ್ತು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೃಷಿ ಆಧಾರಿತ ಮತಗಟ್ಟೆ ಸ್ಥಾಪಿಸಲಾಗಿದೆ. ಇಲ್ಲಿ ಮೆಕ್ಕೆಜೋಳದ ಸ್ವಾಗತ ಕಮಾನು ನಿರ್ಮಾಣ, ಕೃಷಿ ಮಾಹಿತಿಯುಳ್ಳ ಫಲಕಗಳ ಅನಾವರಣ ಮಾಡಲಾಗಿದೆ.ಹೊನ್ನಾಳಿ ತಾ; ಆಂಜನೇಯಪುರದಲ್ಲಿಲಂಬಾಣಿಸಾಂಪ್ರದಾಯಿಕ ಮತಗಟ್ಟೆ, ಚನ್ನಗಿರಿ ತಾ: ಅಸ್ತಾಪನಹಳ್ಳಿಯಲ್ಲಿ ಅಕ್ಕಿಪಿಕ್ಕಿ ಜನಾಂಗದ ಮತಗಟ್ಟೆ, ದಾವಣಗೆರೆ ನಗರದ ನೀರಾವರಿ ಇಲಾಖೆ ಮತಗಟ್ಟೆ 201 ರಲ್ಲಿ ಸಂಚಾರಿ ನಿಯಮಗಳ ಜಾಗೃತಿಯುಳ್ಳ ಮತಗಟ್ಟೆ, ಹರಿಹರ ವೀಳ್ಯೆದೆಲೆ, ಚನ್ನಗಿರಿ ಪಟ್ಟಣ ಅಡಿಕೆ ಬೆಳೆ ಕುರಿತಂತೆ ಮತಗಟ್ಟೆಗಳನ್ನು ವಿಶೇಷವಾಗಿ ಸಿದ್ದಪಡಿಸಲಾಗಿದೆ.

## ಖಾಸಗಿ ಇಟ್ಟಿಗೆ ಭಟ್ಟಿಗಳಲ್ಲಿ ವ್ಯವಸ್ಥೆ ಇಲ್ಲದೆ ಕಾರ್ಮಿಕರ ಬಳಕೆ ಆರೋಪ: ಕಾರ್ಮಿಕ ಅಧಿಕಾರಿ ಭೇಟಿ



» **ಚಳ್ಳಕೆರೆ**

ನಗರದ ಹೊರವಲಯದಲ್ಲಿ ಕಳೆದ ಹಲವಾರು ವರ್ಷಗಳಿಂದ ಖಾಸಗಿಯಾಗಿ ಹಲವಾರು ಇಟ್ಟಿಗೆ ಭಟ್ಟಿಗಳು ಹುಟ್ಟಿಕೊಂಡು, ಯಾವುದೇ ಕಾನೂನು ಪರಿಪಾಲನೆ ಮಾಡದೆ ಇಟ್ಟಿಗೆ ಭಟ್ಟಿಗಳಲ್ಲಿ ನಿಯಮವಿಲ್ಲದೆ ಕೂಲಿಕಾರ್ಮಿಕರು, ಬಾಲ ಕಾರ್ಮಿಕರನ್ನು ಸಹ ಕೆಲಸದಲ್ಲಿ ತೊಡಗಿಸಿಕೊಳ್ಳಲಾಗಿದೆ ಎಂಬುವುದು ಸಾರ್ವಜನಿಕರ ಆರೋಪವಾಗಿದೆ.

ನಗರದನಾಯಕನಹಟ್ಟಿರಸ್ತೆಯ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿಯೇ ಇಟ್ಟಿಗೆ ಭಟ್ಟಿಯೊಂದು ಇದ್ದು ಅಲ್ಲಿ ಪ್ರತಿನಿತ್ಯಇಟ್ಟಿಗಳನ್ನುತಯಾರಿಸುವ ಹಲವಾರು ಗೂಡುಗಳಿವೆ. ಪ್ರತಿನಿತ್ಯ ಇಟ್ಟಿಗೆ ತಯಾರಿಕ ಕಾರ್ಯದಲ್ಲಿ ಕಾರ್ಮಿಕರೊಂದಿಗೆ ಬಾಲಕಾರ್ಮಿಕರನ್ನು ಸಹ ಕಾರ್ಯನಿರ್ವಸುತ್ತಿದ್ದಾರೆಂಬ ಸಾರ್ವಜನಿಕರ ಆಕ್ಷೇಪಣೆ ಹಿನ್ನೆಲೆಯಲ್ಲಿ ಕಾರ್ಮಿಕರ ಅಧಿಕಾರಿ ಕುಸುಮ ಹಾಗೂ ಕಂದಾಯ ಇಲಾಖೆಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಕಾರ್ಮಿಕ ಅಧಿಕಾರಿ ಕುಸುಮ, ಸಾರ್ವಜನಿಕರ ಆಕ್ಷೇಪಣೆ ಹಿನ್ನೆಲೆಯಲ್ಲಿ ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಲಾಯಿತು. ಕಾರ್ಯನಿರ್ವಹಿಸುವ ಬಹುತೇಕ ಕಾರ್ಮಿಕರಿಗೆ ಇನ್ನೂ ಹೆಚ್ಚಿನ ಸೌಲಭ್ಯವನ್ನು ನೀಡುವ ಅವಶ್ಯಕತೆ ಇದೆ. ಆದರೆ, ಕಾರ್ಮಿಕರು ವಾಸಿಸುವ ಸ್ಥಳ ನೋಡಿದರೆ ಭಯಾನಕವಾಗಿದೆ. ಎಲ್ಲೂ ಸಹ ಗಾಳಿಬೆಳಕಿನ ದರ್ಶನವಾಗುವುದಿಲ್ಲ.

## ಪ್ರಮುಖ ಸುದ್ದಿ

# ನಿತ್ಯವೂ ಮುಗಿಲು ನೋಡುವುದೇ ರೈತನ ನಿತ್ಯ ಕಾಯಕ

» **ನಾಗತಿಹಳ್ಳಿಮಂಜುನಾಥ್**

ಹೊಸದುರ್ಗ: ಒಂದು ಕಾಲದಲ್ಲಿ ನಾವು ಎಲ್ಲಿ ನೋಡಿದರೂ ಅಲ್ಲಿ ನೀರು ಕೆರೆ ಕಟ್ಟೆಗಳು ತುಂಬಿ ತುಳುಕುತಿದ್ದವು ಹಿಂದೆ ಮುಂದೆ ತಿರುಗಿ ನೀಡಿದರೂ ಎಲ್ಲೆಲ್ಲೂ ಸಹಾ ನೀರೆ ನೀರು ಅಂದು ನೀರನ್ನು ನಮ್ಮ ಕೈ ಬೋಗಸೆಯಲ್ಲೆ ಕುಡಿಯುತಿದ್ದೆವು ಆದರೆ ಈಗ ನೀರಿಗಾಗಿ ಬೋಗಸೆ ಒಡ್ಡಿದ ದಿನಗಳೇ ಮಾಯವಾಗಿವೆ ಒಂದು ಲೋಟ ನೀರು ಕೋಡಿ ಕುಡಿಯಲು ಎಂದು ಬಾಯಿ ಬಿಟ್ಟು ಕೇಳಿದರೂ ಸಹಾ ನೀರು ಕೊಡಲು ಹಿಂದು ಮುಂದು ನೋಡಿ ಯೋಚಿಸುವ ದಿನಗಳು ಮುಂದೇಕೆ ಈಗಲೇ ನಮ್ ಕಣ್ ಮುಂದೆ ಬಂದು ನಿಂತಿವೆ ಇದೀಗ ನೀರೆಂದರೆ ಎಲ್ಲರ ಪಾಲಿಗೆ ಅಂಮೃತವಾಗಿ ಬಿಟ್ಟಿದೆ.



ಬಿಸಿಲು ಎಂಬುದು ದಿನೇ ದಿನ ಏರುತ್ತಿದೆ. ಮುಂಗಾರು ಮಳೆ ಎಂಬುದು ಮಾಯವಾಗಿ ಬಿಟ್ಟಿದೆ, ಹೊಸದುರ್ಗ ಪಟ್ಟಣದಲ್ಲಿ ಸುಮಾರು 40 ಸಾವಿರ ಜನ ಸಂಖ್ಯೆಮೀರುತ್ತಿದೆಹಾಗೆಯೇಹೊಸದುರ್ಗ ಪಟ್ಟಣಕ್ಕೆ ನೀರು ಕೊಡುವ ಜೀವನದಿ ವೇದಾವತಿ ನದಿ ನೀರು ಸಂಪೂರ್ಣ ಕಾಲಿಯಾಗಿದೆ ಜನರು ಕುಡಿಯುವ ನೀರಿಗಾಗಿ ಅತಂಕ ಪಡುತ್ತಿದ್ದಾರೆ ಆದರೂ ಪುರಸಭೆ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಬರದಂತೆ ನಿಭಾಯಿಸುತ್ತಿದೆ. ಆದರೆ ತಾಲೂಕಿ ಸಾಕಷ್ಟು ಹಳ್ಳಿಗಳನ್ನ ನೋಡಿದರೆ ಕುಡಿಯುವ ನೀರಿಗಾಗಿ ಮಾಡುವುದಾದರು ಎನು ಎಂಬ ಪ್ರಶ್ನೆ ಕಾಡುತ್ತಿದೆ.

ಕಳೆದ ಒಂದು ವರ್ಷದಿಂದಲೂ ಮಳೆಯಾಗದೆ ರೈತರು ಬರಗಾಲದ ಬಿಸಿ ಅನುಭವಿಸುತ್ತಿದ್ದಾರೆ. ಹಾಕಿದ ಬೆಳೆ ಯಾವುದೂ ಕೈ ಸೇರಲಿಲ್ಲ. ಎಲ್ಲೆಲ್ಲೂ ನೀರಿಗೆ ಹಾಹಕಾರ. ಈ ಮಧ್ಯೆ ಇಷ್ಟು ವರ್ಷ ಕಾಲ ಚಿಕ್ಕ ಮಕ್ಕಳ ರೀತಿ ಸಾಕಿ ಬೆಳೆಸಿದ ಅಡಿಕೆ,ಬಾಳೆ ತೆಂಗು ತೋಟಗಳನ್ನ ಉಳಿಸಿಕೊಳ್ಳಲು ತಾಲ್ಲೂಕಿನ ರೈತರು ಹರಸಾಹಸ ಪಡುತ್ತಿದ್ದಾರೆ. ಕೊಳವೆಬಾವಿಯೆಲ್ಲಾ ಬತ್ತಿಹೋಗಿದ್ದು, ರೈತರು ಟ್ಯಾಂಕರ್ ನೀರು ಮೊರೆ ಹೋಗಿದ್ದಾರೆ. ವೇದಾವತಿ ಮೆಲ್ಲ ಮೆಲ್ಲಗೆ ಸೋರಗಿ ಹೋಗುತ್ತಿದೆ.ಕುಡಿಯುವ ನೀರಿಗೆ ತೊಂದರೆಯಿರುವ ಈ ಸಂದರ್ಭದಲ್ಲಿ ತೋಟಗಳನ್ನು ಉಳಿಸಿಕೊಳ್ಳುವುದು ರೈತರಿಗೆ ಸವಾಲಿನ ಕೆಲಸವಾಗಿದೆ. ಸಾವಿರ ಅಡಿ ಕೊಳವೆಬಾವಿ ಕೊರೆಯಿಸಿದರೂ ಒಂದು ಹನಿ ನೀರು ಸಿಗತ್ತಿಲ್ಲ, ದಿನಕ್ಕೆ ಮೂರು ಕೊಳವೆಬಾವಿ ಕೊರೆಯಿಸಿದರೂ ಎಲ್ಲಿಯೂ ನೀರಿಲ್ಲ. ಭೂಮಿ ಬಿಸಿಯಾಗಿದೆ. ಅಡಿಕೆ ಹಾಗೂ ತೆಂಗಿನ ತೋಟಗಳಲ್ಲಿ ಗರಿಗಳೆಲ್ಲಾ ಒಣಗಿವೆ. ಮತ್ತೊಂದು ಕಡೆ ಹಳದಿ ಬಣ್ಣಕ್ಕೆ ತಿರುಗಿ ಸಂಪೂರ್ಣ ಅಳಿವಿನತ್ತ ಸಾಗುತ್ತಿವೆ. ತೋಟಗಳನ್ನು ಉಳಿಸಿಕೊಳ್ಳಲು ರೈತರು ಟ್ಯಾಂಕರ್ ಮೊರೆ ಹೋಗಿದ್ದು, ಪ್ರಸ್ತುತ ಟ್ಯಾಂಕರ್ ನೀರಿಗೂ ಭರ್ಜರಿ ಬೇಡಿಕೆಯುಂಟಾಗಿದೆ.

ತೆಂಗು ಹಾಗೂ ಅಡಿಕೆ ಮರದ ಗರಿಗಳೆಲ್ಲಾ ಒಣಗುತ್ತಿವೆ. ಗುಳ್ಳು (ತೆಂಗಿನಕಾಯಿಯಾಗುವ ಸಣ್ಣ ಪೀಚು)ಗಳೆಲ್ಲಾ ಉದುರುತ್ತಿವೆ. ಎಷ್ಟು ನೀರುಣಿಸಿದರೂ ಸಾಲುತ್ತಿಲ್ಲ. ಒಂದೆರೆಡು ಸಾಕಷ್ಟು ಮೋಟಾರ್‌ಗಳು ಕೂಡ ಸುಟ್ಟಿದ್ದು ಸಾಕಷ್ಟು ಮಂದಿ ಲಕ್ಷಾಂತರ ರೂ ನಷ್ಟ ಅನುಭವಿಸಿದ್ದಾರೆ.

ತಾಲ್ಲೂಕಿನ ಬಹುತೇಕ ಭಾಗಗಳಲ್ಲಿನ ರೈತರು ನೀರಿನ ಸಮಸ್ಯೆ ಎದುರಿಸುತ್ತಿದ್ದು, ಸಮಯಕ್ಕೆ ಸರಿಯಾಗಿ ಹದ ಮಳೆ ಬಾರದಿದ್ದಲ್ಲಿ ಅಡಿಕೆ ಹಾಗೂ ತೆಂಗಿನ ಮರಗಳನ್ನು ಉಳಿಸಿಕೊಳ್ಳುವುದು ಸವಾಲಾಗಿದೆ. ಮುಂದಿನ ಇಳುವರಿಯೂ ಸಹ ಕುಂಠಿತವಾಗಬಹುದು ಎಂಬುದು ರೈತರ ಆತಂಕ ಈಗಿರುವ ಪರುಸ್ಥಿತಿಯಲ್ಲಿ ಹದ ಮಳೆಯಾಗಿ, ಜಮೀನುಗಳಲ್ಲಿ ಹಸಿಯಾದರೆ ಸಾಕು, ಇರುವ ತೋಟಗಳಿಗೆ ನವಉಲ್ಲಾಸ ಹಾಗು ಚೈತನ್ಯ ಬಂದಂತಾಗುತ್ತದೆ. ನಿರೀಕ್ಷಿತ ಪ್ರಮಾಣದ ಫಸಲು ಪಡೆಯಲು ಇನ್ನೂ ಎರಡು ಮೂರು ವರ್ಷಗಳೇ ಬೇಕಾಗುತ್ತದೆ ಎಂಬುದು ರೈತರ ಅಭಿಪ್ರಾಯವಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T